

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 240 | ₹ ಬೆಲೆ: 4 | Thursday, 16, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ.ವೈ ವಿಜಯೇಂದ್ರ ಪದಗ್ರಹಣ; ನಳಿನ್ ಕುಮಾರ್ ಕಟೀಲ್ ಹಸ್ತಾಂತರ



ಬೆಂಗಳೂರು: ರಾಜ್ಯ ಬಿಜೆಪಿ ನೂತನ ಅಧ್ಯಕ್ಷರಾಗಿ ಬಿ.ವೈ ವಿಜಯೇಂದ್ರ ಅವರ ಪದಗ್ರಹಣವಾಗಿದೆ. ಬಿಜೆಪಿ ಕಚೇರಿಯಲ್ಲಿ ನಳಿನ್ ಕುಮಾರ್ ಕಟೀಲ್ ಅವರು ವಿಜಯೇಂದ್ರ ಅವರಿಗೆ ಬಿಜೆಪಿ ಬಾವುಟ ನೀಡುವ ಮೂಲಕ ಅಧಿಕಾರವನ್ನು ಹಸ್ತಾಂತರ ಮಾಡಿದ್ದಾರೆ.

ಬಿ.ವೈ ವಿಜಯೇಂದ್ರ ಅವರು ರಾಜ್ಯ ಬಿಜೆಪಿಯ 11ನೇ ರಾಜ್ಯಾಧ್ಯಕ್ಷರಾಗಿ ಪದಗ್ರಹಣ ಮಾಡಿದ್ದಾರೆ. ಅಧಿಕಾರ ಹಸ್ತಾಂತರಿಸಿದ ವಿಜಯೇಂದ್ರರನ್ನು ಸನ್ಮಾನಿಸಿದ ನಳಿನ್ ಕುಮಾರ್ ಕಟೀಲ್ ಅವರು ಅಪ್ಪಿಕೊಂಡು ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ.

ವಿಜಯೇಂದ್ರ ಅವರ ಪದಗ್ರಹಣದ ಹಿನ್ನೆಲೆಯಲ್ಲಿ ರಾಜ್ಯ ಬಿಜೆಪಿಗೆ ಘಟಾನುಘಟಿ ನಾಯಕರ ದಂಡೇ ಹರಿದು ಬಂದಿದೆ. ಎಲ್ಲಾ ನಾಯಕರು ನೂತನ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರಿಗೆ ಶುಭಾಶಯಗಳನ್ನು ಕೋರಿದ್ದಾರೆ.

## ಬೆಂಗಳೂರು ಕಂಬಳ: 1 ಕೋಟಿ ರೂ.ಅನುದಾನ ಘೋಷಿಸಿದ ಸಿಎಂ

### ಐಶ್ವರ್ಯ ರೈ, ಅನುಷ್ಕಾ ಶೆಟ್ಟಿ ಭಾಗಿ

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಇದೇ ಮೊದಲ ಬಾರಿಗೆ ಕಂಬಳ ನಡೆಯಲಿದ್ದು, ಬೆಂಗಳೂರು ಕಂಬಳಕ್ಕೆ ಕನಿಷ್ಠ 3 ರಿಂದ 5 ಲಕ್ಷ ಜನರು ಬರುವ ನಿರೀಕ್ಷೆ ಇದೆ. ಕಂಬಲಕ್ಕೆ ಸಕಲ ಸಿದ್ಧತೆಗಳು ಭರದಿಂದ ಸಾಗಿದೆ ಎಂದು ಬೆಂಗಳೂರು ಕಂಬಳ ಸಮಿತಿ ಗೌರವಾಧ್ಯಕ್ಷ ಕೆ ಪ್ರಕಾಶ್ ಶೆಟ್ಟಿ ಅವರು ಹೇಳಿದ್ದಾರೆ.

ಅರಮನೆ ಮೈದಾನದಲ್ಲಿ ನಡೆಯಲಿರುವ ಬೆಂಗಳೂರು ಕಂಬಳ ತಯಾರಿ ಸಲುವಾಗಿ ಬೆಂಗಳೂರಿನ ಬಂಟರ ಸಂಘದಲ್ಲಿ ಕರಾವಳಿಯ ವಿವಿಧ ಜಾತಿ ಭಾಷಾ ಸಂಘಟನೆಗಳ ಜೊತೆ ನಡೆದ ಬೃಹತ್ ಸಮಾಲೋಚನಾ ಸಭೆ ಬಳಿಕ ಆಯೋಜಿಸಿದ ಬಹಿರಂಗ ಸಮಾವೇಶದಲ್ಲಿ ಪ್ರಕಾಶ್ ಶೆಟ್ಟಿ ಅವರು ಮಾತನಾಡಿದರು.

ಇದು ಐತಿಹಾಸಿಕ ಕಾರ್ಯಕ್ರಮವಾಗಿದ್ದು, ಕರಾವಳಿಯ ಸಮಸ್ತ ಸಮುದಾಯದವರು ಒಂದೆಡೆ ಒಗ್ಗಟ್ಟಾಗಿ ಸೇರುವ ಬೃಹತ್ ವೇದಿಕೆ ಇದಾಗಲಿದೆ ಎಂದು ಹೇಳಿದರು.



ಇಂದಿನ ಸಮಾಲೋಚನಾ ಸಭೆಯಲ್ಲಿ ಕರಾವಳಿಯ ವಿವಿಧ ಭಾಷೆ-ಜಾತಿಗಳ 50ಕ್ಕೂ ಅಧಿಕ ಸಂಘಟನೆಗಳು ಭಾಗಿಯಾಗಿದ್ದು, ಅವರೊಂದಿಗೆ ಕಾರ್ಯಕ್ರಮದ ರೂಪುರೇಷೆ ಬಗ್ಗೆ ಮಾತುಕತೆ ನಡೆಸಲಾಗಿದೆ. ಬೆಂಗಳೂರು ಕಂಬಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 1 ಕೋಟಿ ರೂ. ಅನುದಾನ ಘೋಷಿಸಿದ್ದಾರೆ ಎಂದು ತಿಳಿಸಿದರು.

ಕಂಬಳ ಸಮಿತಿ ಅಧ್ಯಕ್ಷ, ಶಾಸಕ ಅಶೋಕ್ ರೈ ಮಾತನಾಡಿ, ಬೆಂಗಳೂರು ಕಂಬಳಕ್ಕೆ ಈಗಾಗಲೇ 150ಕ್ಕೂ ಅಧಿಕ ಕೋಣಗಳ ನೋಂದಣಿ ಆಗಿದ್ದು, ಆ ಎಲ್ಲಾ ಕೋಣಗಳನ್ನು ನ.23ರಂದು ಉಪ್ಪಿನಂಗಡಿಯಲ್ಲಿ ಬೀಳ್ಕೊಡುಗೆ ಮಾಡಿ ಕಳಿಸಿಕೊಡಲಾಗುವುದು. ಅಷ್ಟೂ ಕೋಣಗಳನ್ನು ಹಾಸನ ಹಾಗೂ ನೆಲಮಂಗಲದಲ್ಲಿ ಅದ್ದೂರಿಯಾಗಿ ಸ್ವಾಗತಿಸಿಕೊಳ್ಳಲಾಗುವುದು. ಅಲ್ಲದೆ, ಪ್ರತಿ ತಾಲೂಕಲ್ಲೂ ಸ್ವಾಗತ–ಬೀಳ್ಕೊಡುಗೆ ಇರಲಿದೆ ಎಂದರು.

ಸಮಿತಿ ಕಾರ್ಯಾಧ್ಯಕ್ಷ, ಸಂಗೀತ ನಿರ್ದೇಶಕ ಗುರುಕಿರಣ್ ಮಾತನಾಡಿ, ಬೆಂಗಳೂರು ಕಂಬಳ ಬೆಂಗಳೂರಿನ ಅರಮನೆ ಮೈದಾನದ 70 ಎಕರೆ ಜಾಗದಲ್ಲಿ ನಡೆಯಲಿದೆ ಎಂದು ತಿಳಿಸಿದರು.

ಸಮಿತಿ ಸಂಘಟನಾ ಅಧ್ಯಕ್ಷ ಉಮೇಶ್ ಶೆಟ್ಟಿ ಅವರು ಮಾತನಾಡಿ, ಬೆಂಗಳೂರು ಕಂಬಳಕ್ಕೆ ಬಾಲಿವುಡ್ ನಟಿ ಐಶ್ವರ್ಯಾ ರೈ, ಕರಾವಳಿ ಬೆಡಗಿ ಅನುಷ್ಕಾ ಶೆಟ್ಟಿ ಸೇರಿದಂತೆ ವಿವಿಧ ಚಿತ್ರರಂಗಗಳಲ್ಲಿ ಇರುವ ಕರಾವಳಿ ಮೂಲದ ಸಿನಿಮಾತಾರೆಯರು ಆಗಮಿಸಲಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 'ಬೆಂಗಳೂರು ಕಂಬಳ ನಮ್ಮ ಕಂಬಳ' ಎಂಬ ಥೀಮ್ ಸಾಂಗ್ ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಲಾಯಿತು. ಈ ಥೀಮ್ ಸಾಂಗ್ ವಿ.ಮನೋಹರ್ ಸಾಹಿತ್ಯ, ಗುರುಕಿರಣ್ ಸಂಗೀತ ಸಂಯೋಜನೆ, ಮಣಿಕಾಂತ್ ಕದ್ರಿ ಪ್ರೋಗ್ರಾಮಿಂಗ್‌ನಲ್ಲಿ ಮೂಡಿ ಬಂದಿದೆ.

## ಕೆಇಎ ಪರೀಕ್ಷೆ ಅಕ್ರಮ: ಮೂವರನ್ನು ವಶಕ್ಕೆ ಪಡೆದ ಸಿಐಡಿ

ಕಲಬುರಗಿ: ಕೆಇಎ ನಡೆಸಿದ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮವೆಸಗಿದ ಪ್ರಕರಣ ಪೊಲೀಸರಿಂದ ಹಸ್ತಾಂತರವಾಗುತ್ತಿದ್ದಂತೆಯೇ ಸಿಐಡಿ ಬೇಟೆ ಶುರು ಮಾಡಿದೆ. ಸಿಐಡಿ ಡಿವೈಎಸ್ಪಿ ತನ್ವೀರ್ ಹಾಗೂ ಶಂಕರಗೌಡ ಪಾಟೀಲ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದ್ದು ಮತ್ತೋರ್ವ ಅಭ್ಯರ್ಥಿ ಸೇರಿ ಮೂವರನ್ನು ಸಿಐಡಿ ಟೀಂ ವಶಕ್ಕೆ ಪಡೆದಿದೆ.

ಪ್ರಮುಖ ಆರೋಪಿ R.D.ಪಾಟೀಲ್ ಸೂಚನೆಯಂತೆ ಅಭ್ಯರ್ಥಿಗಳಿಗೆ ಬ್ಲೂಟೂತ್ ಸಪ್ಲೈ ಮಾಡಿರುವ ಆರೋಪದಡಿ ಮೂವರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಇನ್ನು ಕೆಇಎ ಅಕ್ರಮ ಕೇಸ್ ಸಿಐಡಿಗೆ ಹಸ್ತಾಂತರ ಆಗಿದ್ದರಿಂದ ಅಧಿಕಾರಿಗಳು ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಕಲಬುರಗಿ ಎಒಈಅ ಕೋರ್ಟ್‌ಗೆ ಸಿಐಡಿ ಅಧಿಕಾರಿಗಳು ಮಾಹಿತಿ ನೀಡಿದ್ದು ಆರ್ಡಿ ಪಾಟೀಲ್ ನ್ಯಾಯಾಂಗ ಬಂಧನ ಅವಧಿ ಇಂದಿಗೆ ಮುಕ್ತಾಯ ಹಿನ್ನಲೆ ಆರ್ಡಿ ಪಾಟೀಲ್ ಸೇರಿದಂತೆ ಹಲವರನ್ನ ಇಂದು ಕೋರ್ಟ್‌ಗೆ ಹಾಜರು ಪಡಿಸಲಾಗುತ್ತಿದೆ. ಕಿಂಗ್‌ಪಿನ್ ಆರ್ಡಿ ಪಾಟೀಲ್‌ನನ್ನ ವಶಕ್ಕೆ ನೀಡುವಂತೆ ಸಿಐಡಿ ಅಧಿಕಾರಿಗಳು ಕೋರ್ಟ್‌ಗೆ ಮನವಿ ಸಲ್ಲಿಸಿದ್ದಾರೆ.

## ಸೋನಿಯಾ ಗಾಂಧಿ ಜೈಪುರಕ್ಕೆ ಶಿಫ್ಟ್



ನವದೆಹಲಿ: ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದ ನಂತರ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರು ದೆಹಲಿಯಲ್ಲಿ ಗಾಳಿಯ ಗುಣಮಟ್ಟ ಸುಧಾರಿಸುವವರೆಗೆ ತಾತ್ಕಾಲಿಕವಾಗಿ ಜೈಪುರಕ್ಕೆ ಶಿಫ್ಟ್ ಆಗಿದ್ದಾರೆ.

ಸೋನಿಯಾ ಗಾಂಧಿ ಅವರು ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದಾರೆ ಮತ್ತು ವೈದ್ಯರು ತಾತ್ಕಾಲಿಕವಾಗಿ ಗಾಳಿಯ ಗುಣಮಟ್ಟ ಉತ್ತಮವಾಗಿರುವ ಸ್ಥಳಕ್ಕೆ ತೆರಳಲು ಸಲಹೆ ನೀಡಿದ್ದಾರೆ ಎಂದು ಹೇಳಲಾಗುತ್ತಿದೆ. ಖಾಸಗಿ ವಾಯು ಗುಣಮಟ್ಟ ಮಾನಿಟರಿಂಗ್ ವೆಬ್‌ಸೈಟ್ ಚಿಡು.ಎಟಿ ಪ್ರಕಾರ ಮಂಗಳವಾರ ದೆಹಲಿಯ ವಾಯು ಗುಣಮಟ್ಟ ಸೂಚ್ಯಂಕವು 375 ಆಗಿದ್ದು, ಇದು 'ತೀವ್ರ' ವಿಭಾಗದಲ್ಲಿದೆ,

ಜೈಪುರದ ಅಂಕಿಅಂಶವು 72 ಆಗಿದ್ದು, 'ಮಧ್ಯಮ' ವಿಭಾಗದಲ್ಲಿದೆ.

ಈ ವರ್ಷದ ಕೊನೆಯಲ್ಲಿ ವಿಧಾನಸಭಾ ಚುನಾವಣೆ ನಡೆಯಲಿರುವ ವಿವಿಧ ರಾಜ್ಯಗಳಲ್ಲಿ ರ್ಯಾಲಿಗಳಲ್ಲಿ ಭಾಗವಹಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಬುಧವಾರ ಛತ್ತೀಸ್‌ಗಢಕ್ಕೆ ತೆರಳುವ ಮೊದಲು ಮಂಗಳವಾರ ರಾತ್ರಿ ಜೈಪುರದಲ್ಲಿ ತಾಯಿ ಸೋನಿಯಾ ಗಾಂಧಿ ಅವರನ್ನು ಭೇಟಿ ಮಾಡಲಿದ್ದಾರೆ. ರ್ಯಾಲಿ ನಂತರ ಮತ್ತೆ ಜೈಪುರಕ್ಕೆ ಹಿಂತಿರುಗುತ್ತಾರೆ ಎಂದು ಹೇಳಲಾಗುತ್ತಿದೆ.

ದೆಹಲಿಯಲ್ಲಿನ ಮಾಲಿನ್ಯದಿಂದ ರಕ್ಷಿಸಿಕೊಳ್ಳಲು ಸೋನಿಯಾ ಗಾಂಧಿ ಬೇರೆ ನಗರಕ್ಕೆ ಹೋಗುತ್ತಿರುವುದು ಇದೇ ಮೊದಲಲ್ಲ.

2020 ರ ಚಳಿಗಾಲದಲ್ಲಿ, ಸೋನಿಯಾ ಗಾಂಧಿ ತಮ್ಮ ವೈದ್ಯರ ಸಲಹೆಯ ಮೇರೆಗೆ ಗೋವಾಕ್ಕೆ ಹೋಗಿದ್ದರು.

## ಲಿಂಗಾಯತರು ಬಿಜೆಪಿ ಪರ, ನಮ್ಮ ಪರವೂ ಇದ್ದಾರೆ: ಸಚಿವ ಸತೀಶ್ ಜಾರಕಿಹೊಳಿ

ಚಾಮರಾಜನಗರ: ಬಿಜೆಪಿ ನೂತನ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಲಿಂಗಾಯತ ಮತಗಳನ್ನು ಸೆಳೆಯುತ್ತಾರೆ ಎನ್ನುವ ವಿಚಾರವಾಗಿ ಪ್ರತಿಕ್ರಿಯಿಸಿರುವ ಸಚಿವ ಸತೀಶ್ ಜಾರಕಿಹೊಳಿ, ಲಿಂಗಾಯತರು ಮೊದಲಿಂದಲೂ ಹೆಚ್ಚು ಬಿಜೆಪಿ ಪರ ಇದ್ದಾರೆ. ಅದೇನು ಹೊಸದಲ್ಲ ಎಂದಿದ್ದಾರೆ.

ಚಾಮರಾಜನಗರದಲ್ಲಿ ಮಾತನಾಡಿದ ಅವರು, ಲಿಂಗಾಯತರು ಮೊದಲಿಂದಲೂ ಹೆಚ್ಚು ಬಿಜೆಪಿ ಪರ ಇದ್ದಾರೆ. ನಮ್ಮ ಜತೆ ಇರುವವರು ಇದ್ದಾರೆ. ಅವರು ಬಂದ ತಕ್ಷಣ ಏನು ವ್ಯತ್ಯಾಸ ಆಗಲ್ಲ ಎಂದು ಹೇಳಿದ್ದಾರೆ.

ಬಿಜೆಪಿಯವರ ಜತೆ ಹೆಚ್ಚಿನ ಲಿಂಗಾಯತರು ಇದ್ದಾರೆ ಅಷ್ಟೇ. ಬಿಜೆಪಿ ರಾಜ್ಯ ಘಟಕದ ನೂತನ ಅಧ್ಯಕ್ಷ ವಿಜಯೇಂದ್ರ ಅವರಿಗೆ ಮುಂದೆ ಹೆಚ್ಚಿನ ಹೋರಾಟಗಳಿವೆ. ಆ ಎಲ್ಲ ಜವಾಬ್ದಾರಿ ನಿರ್ವಹಿಸುತ್ತಾರೆ ಎಂದು ಅವರಿಗೆ ಆ ಸ್ಥಾನ ಕೊಟ್ಟಿದ್ದಾರೆ. ನೋಡೋಣ, ಮುಂದೆ




ಲೋಕಸಭಾ ಚುನಾವಣೆ ಇದೆ. ಅದಾದ ಮೇಲೆ ಫೈನಲ್ ಮ್ಯಾಚ್, 2028 ರ ವಿಧಾನಸಭಾ ಚುನಾವಣೆ ಇದೆ. ಅವರು ಯಾವ ರೀತಿ ಸಂಘಟನೆ ಮಾಡ್ತಾರೆ, ಪಕ್ಷ ಯಾವರೀತಿ ಸಹಕಾರ ನೀಡುತ್ತಾರೆ ಕಾದು ನೋಡಬೇಕು ಎಂದು ಸತೀಶ್ ಜಾರಕಿಹೊಳಿ ಹೇಳಿದರು.

ಸಿಎಂ ಬದಲಾವಣೆ ವಿಚಾರ ಮುಗಿದು ಹೋದ ಕಥೆ. ಆ ಬಗ್ಗೆ ಪದೇ ಪದೇ ಹೇಳೋದು ಏನು ಇಲ್ಲ. ಸಿಎಂ ಬದಲಾವಣೆ ಅಂತೂ ಇಲ್ಲವೇ ಇಲ್ಲ. ಸಿಎಂ ಇದಾರೆ, ಸಿದ್ದರಾಮಯ್ಯ ಗಟ್ಟಿಯಾಗಿದ್ದಾರೆ ಅಷ್ಟೇ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಜೆಡಿಎಸ್, ಬಿಜೆಪಿ ನಾಯಕರ ಕಾಂಗ್ರೆಸ್ ಸೇರ್ಪಡೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಅದೆಲ್ಲಾ ಸಿಎಂ, ಡಿಸಿಎಂ ಹಂತದಲ್ಲಿ ಚರ್ಚೆ ನಡೆಯುತ್ತಿದೆ. ನಮ್ಮ ಹಂತದಲ್ಲಿ ಅದೆಲ್ಲ ಏನಿಲ್ಲ. ಜಿಟಿ ದೇವೇಗೌಡ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ಜೆಡಿಎಸ್ ಸೇರುವ ವಿಚಾರದ ಬಗ್ಗೆ ನನಗೆ ಗೊತ್ತಿಲ್ಲ ಎಂದು ಹೇಳಿದ್ದಾರೆ.

ಬಿಜೆಪಿ ನಾಯಕ ವಿ ಸೋಮಣ್ಣ ಕಾಂಗ್ರೆಸ್ ಸೇರುತ್ತಾರೆ ಎನ್ನುವ ವಿಚಾರವಾಗಿ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, ಅವೆಲ್ಲ ನಡೆಯುತ್ತಿವೆ, ಕಾದು ನೋಡೋಣ ಎಂದು ಹೇಳಿದ್ದಾರೆ.

## ಬೆಂಗಳೂರು: 'ಡಿಕೆ ಸಹೋದರರನ್ನು ಕೊಲ್ಲಿ' ಎಂದು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಹಾಕಿದ ವ್ಯಕ್ತಿ; ಬಂಧನ




ಬೆಂಗಳೂರು: ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಅವರ ಸಹೋದರ ಕಾಂಗ್ರೆಸ್ ಸಂಸದ ಡಿಕೆ ಸುರೇಶ್ ಅವರನ್ನು ಕೊಲ್ಲುವಂತೆ ಜನರನ್ನು ಒತ್ತಾಯಿಸುವ ಸಾಮಾಜಿಕ ಮಾಧ್ಯಮ ಪೋಸ್ಟ್ ಹಾಕಿದ್ದಕ್ಕಾಗಿ ಪೊಲೀಸರು ಬುಧವಾರ ವ್ಯಕ್ತಿಯೊಬ್ಬನನ್ನು ಬಂಧಿಸಿದ್ದಾರೆ.

ಬಂಧಿತ ವ್ಯಕ್ತಿಯನ್ನು ರಂಜಿತ್ ಆರ್‌ಎಂ ಎಂದು ಗುರುತಿಸಲಾಗಿದೆ. ಈ ಸಂಬಂಧ ಬೆಂಗಳೂರಿನ ಜಯನಗರ ಬ್ಲಾಕ್‌ನ ಯುವ ಕಾಂಗ್ರೆಸ್ ಅಧ್ಯಕ್ಷ ಶರತ್ ದೂರು ದಾಖಲಿಸಿದ್ದಾರೆ.

ಆರೋಪಿ, 'ಡಿಕೆ ಸಹೋದರರನ್ನು ಕೊಲ್ಲು' ಎಂಬ ಶೀರ್ಷಿಕೆಯೊಂದಿಗೆ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಾಕಿದ್ದರು. ಡಿಕೆ ಶಿವಕುಮಾರ್ ಮತ್ತು ಅವರ ಸಹೋದರ ಸುರೇಶ್ ಅವರನ್ನು ಉಲ್ಲೇಖಿಸಲು 'ಡಿಕೆ ಸಹೋದರರು' ಎಂಬ ಪದವನ್ನು ಸಾಮಾನ್ಯವಾಗಿ ಬಳಸಲಾಗುತ್ತದೆ.

ಆರೋಪಿಯು ಬೆಂಗಳೂರು ನಗರ ಪೊಲೀಸರ ಬಳಿ ಸೈಬರ್ ಕ್ರೈಂ ಡಿಟೆಕ್ಟಿವ್ ಎಂದು ಹೇಳಿಕೊಂಡಿದ್ದಾನೆ. ಆತ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಪಕ್ಷ ಮತ್ತು ಮುಸ್ಲಿಂ ಸಮುದಾಯದ ವಿರುದ್ಧ ಆಕ್ಷೇಪಾರ್ಹ ಮತ್ತು ಅವಹೇಳನಕಾರಿ ಪೋಸ್ಟ್‌ಗಳನ್ನು ಹಾಕಿದ್ದಾರೆ. ಜಯನಗರ ಪೊಲೀಸರು ಪ್ರಕರಣದ ತನಿಖೆ ನಡೆಸುತ್ತಿದ್ದಾರೆ.

## ಸ್ಪಾ ಹೆಸರಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ 6 ಮಹಿಳೆಯರು ಅರೆಸ್ಟ್



ಸ್ಪಾ ಹೆಸರಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಅಡ್ಡೆ ಮೇಲೆ ದಾಳಿ ನಡೆಸಿ 6 ಜನರನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಮಹಿಳೆಯರು ಕಲ್ಕತ್ತಾ, ಬೆಂಗಳೂರು, ಆಂಧ್ರಪ್ರದೇಶದವರೆಂದು ತಿಳಿದುಬಂದಿದೆ.

ಮಾಹಿತಿ ಮೇರೆಗೆ ಕೂಡಲೇ ಎಚ್ಚೆತ್ತ ಟಾಸ್ಕ್ ಫೋರ್ಸ್ ಪೊಲೀಸ್ ತಂಡ ಸ್ಪಾ ಮೇಲೆ ದಾಳಿ ಮಾಡಿತ್ತು ಎಂದು ತಿಳಿದುಬಂದಿದೆ.

ಇದೇ ವೇಳೆ ಪೊಲೀಸ್ ಇಲಾಖೆ ತಿಳಿಸಿದ ಮಾಹಿತಿ ಪ್ರಕಾರ, ಮಸಾಜ್ ಪಾರ್ಲರ್ ನಡೆಸುತ್ತಿದ್ದವರು, ಬರುವ ಕಸ್ಟಮರ್ ಜೊತೆ ಹುಡುಗಿಯರಿರುವ ಬಗ್ಗೆ ಮಾಹಿತಿ ನೀಡುತ್ತಾರೆ. ಗಿರಾಕಿ ಓಕೆ ಅಂದರೆ 10,000 ರುಪಾಯಿಗೆ ಡೀಲ್ ಮುಗಿಸುತ್ತಾರೆ ಎಂದು ತಿಳಿಸಿದ್ದಾರೆ.

ಸದ್ಯ ಬಂಧಿತರಿಂದ 26,000 ನಗದು, 9 ಮೊಬೈಲ್ ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## 4 ವರ್ಷ 3 ತಿಂಗಳ ಅವಧಿಯಲ್ಲಿ ಪಕ್ಷಕ್ಕಾಗಿ ಶ್ರದ್ಧೆಯಿಂದ ದುಡಿದಿದ್ದೇನೆ: ನಳಿನ್ ಕುಮಾರ್ ಕಟೀಲ್

ಬೆಂಗಳೂರು: ದೇಶದ ಅತಿದೊಡ್ಡ ಪಕ್ಷದ ರಾಜ್ಯಾಧ್ಯಕ್ಷನಾಗಿ 4 ವರ್ಷ 3 ತಿಂಗಳ ಅವಧಿಯಲ್ಲಿ ಮಾತೃಸಮಾನ ಪಕ್ಷದ ಸಂಘಟನೆಗಾಗಿ ಶ್ರದ್ಧೆಯಿಂದ ದುಡಿದಿದ್ದೇನೆಂದು ನಳಿನ್ ಕುಮಾರ್ ಕಟೀಲ್ ಅವರು ಬುಧವಾರ ಹೇಳಿದ್ದಾರೆ.

ನೂತನ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ಅಧಿಕಾರ ಹಸ್ತಾಂತರಕ್ಕೂ ಮುನ್ನ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರಿಗೆ ಧನ್ಯವಾದ ಹೇಳಿ ನಳಿನ್ ಕುಮಾರ್ ಅವರು ಪತ್ರವೊಂದನ್ನು ಬರೆದಿದ್ದಾರೆ. ಈ ಪತ್ರವನ್ನು ಸಾಮಾಜಿಕ ಜಾಲತಾಣ ಎಕ್ಸ್ (ಟ್ವಿಟರ್)ನಲ್ಲಿ ಪೋಸ್ಟ್ ಮಾಡಿದ್ದಾರೆ.

ಮಾತೃ ಸಮಾನವಾಗಿರುವ ನಮ್ಮ ಪಕ್ಷ ಮತ್ತು ಹಿರಿಯರು ಸಾಮಾನ್ಯ ಕಾರ್ಯಕರ್ತನಾದ ನನಗೆ ಪಕ್ಷದ ರಾಜ್ಯದ ಅತ್ಯುನ್ನತ ಜವಾಬ್ದಾರಿ ವಹಿಸಿದ ಈ 4 ವರ್ಷ 3 ತಿಂಗಳ ಅವಧಿಯಲ್ಲಿ ಈ ಹೊಣೆಗಾರಿಕೆಯನ್ನು ನಿಮ್ಮೆಲ್ಲರ ಸಹಕಾರದಿಂದ ಪರಿಪೂರ್ಣತೆಯಿಂದ ನಿರ್ವಹಿಸಿದ್ದೇನೆ.

ಈ ಅವಧಿಯಲ್ಲಿ ಪೂರ್ಣ ಪ್ರಮಾಣದಲ್ಲಿ ಮಾರ್ಗದರ್ಶನ ಮಾಡಿರುವ ನಮ್ಮ ಹೆಮ್ಮೆಯ ಪ್ರಧಾನಿ ಶ್ರೀ ನರೇಂದ್ರ ಮೋದಿಜಿಯವರಿಗೆ, ಜವಾಬ್ದಾರಿ ಸ್ವೀಕರಿಸುವ ಸಂದರ್ಭದಲ್ಲಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾಗಿ ಮತ್ತು ಈಗ ರಾಷ್ಟ್ರೀಯ ಗೃಹಸಚಿವರಾಗಿರುವ ಶ್ರೀ ಅಮಿತ್ ಶಾ ಅವರಿಗೆ, ಪಕ್ಷದ



ಪ್ರಸ್ತುತ ರಾಷ್ಟ್ರಾಧ್ಯಕ್ಷರಾದ ಶ್ರೀ ಜೆ. ಪಿ. ನಡ್ಡಾ ಅವರಿಗೆ, ಹೆಜ್ಜೆಹೆಜ್ಜೆಗೂ ಮಾರ್ಗದರ್ಶನ ನೀಡುತ್ತಾ ಬಂದಿರುವ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಶ್ರೀ ಬಿ. ಎಲ್. ಸಂತೋಷ್ ಜಯವರಿಗೆ, ನಮ್ಮ ಪಕ್ಷದ ಶಕ್ತಿ ಯಡಿಯೂರಪ್ಪನವರಿಗೆ, ಪಕ್ಷದ ಎಲ್ಲಾ ರಾಷ್ಟ್ರೀಯ ಮತ್ತು ರಾಜ್ಯ ಮುಖಂಡರುಗಳಿಗೆ, ಪಕ್ಷದ ರಾಜ್ಯ ಪದಾಧಿಕಾರಿಗಳಿಗೆ, ಮೋರ್ಚಾಗಳ ಮುಖಂಡರುಗಳಿಗೆ ಹಾಗೂ ವಿಶೇಷವಾಗಿ ನಮ್ಮ ಪಕ್ಷದ ಎಲ್ಲಾ ದೇವದುರ್ಲಭ ಕಾರ್ಯಕರ್ತ ಬಂಧುಗಳಿಗೆ ಧನ್ಯವಾದಗಳು.

ಈ ಅವಧಿಯಲ್ಲಿ ಕಾಯಾ, ವಾಚಾ, ಮನಸಾ ಪಕ್ಷದ ಸೇವೆ ಮಾಡುವ ಸಂದರ್ಭದಲ್ಲಿ ಪ್ರತ್ಯಕ್ಷವಾಗಿ, ಪರೋಕ್ಷವಾಗಿ ನನ್ನ ಕೈ ಹಿಡಿದು ಮುನ್ನಡೆಸಿದ ಎಲ್ಲಾ ಪ್ರೀತಿಪಾತ್ರರಿಗೆ ಧನ್ಯವಾದಗಳು. ಕಟೀಲು ಶ್ರೀ ದುರ್ಗಾಪರಮೇಶ್ವರಿ ದೇವಿಯ ಕೃಪೆ, ದೈವದೇವರುಗಳ ಅನುಗ್ರಹದಿಂದ ಪಕ್ಷದ ಬೆಳವಣಿಗೆಗೆ ನನ್ನ ಸೇವೆ ನಿರಂತರವಾಗಿರಲಿದೆ. ಇನ್ನು ಮುಂದೆಯೂ ಸರ್ವರ ಸಹಕಾರ, ಪ್ರೀತಿ, ವಿಶ್ವಾಸ ಬಯಸುವ ನಿಮ್ಮ ನಳಿನ್ ಕುಮಾರ್ ಕಟೀಲ್ ಎಂದು ಹೇಳಿದ್ದಾರೆ.

ನನಗೆ ಕೊಟ್ಟ ಸಹಕಾರವನ್ನು ಬಿ.ವೈ.ವಿಜಯೇಂದ್ರಗೂ ಕೊಡಬೇಕು. ವಿಜಯೇಂದ್ರ ಅವರಿಗೆ ಅಧಿಕಾರ ಹಸ್ತಾಂತರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಟೀಲ್ ಅವರು, ವಿಜಯೇಂದ್ರ ನೇತೃತ್ವದಲ್ಲಿ ರಾಜ್ಯದಲ್ಲಿ ಪಕ್ಷ ಸಂಘಟನೆ ಮಾಡುತ್ತೇವೆಂದು ಹೇಳಿದರು.

ನನಗೆ ಕೊಟ್ಟ ಸಹಕಾರವನ್ನು ಬಿ.ವೈ.ವಿಜಯೇಂದ್ರಗೂ ಕೊಡಬೇಕು. ರಾಜ್ಯಾಧ್ಯಕ್ಷರಾದ ವಿಜಯೇಂದ್ರಗೆ ನಾವೆಲ್ಲರೂ ಜೊತೆಯಾಗಿ ನಿಲ್ತೇವೆ. ಲೋಕಸಭೆ ಚುನಾವಣೆಯಲ್ಲಿ ರಾಜ್ಯದ 28 ಸ್ಥಾನಗಳಲ್ಲೂ ಗೆಲ್ಲುವ ಪ್ರಯತ್ನ ಮಾಡುತ್ತೇವೆಂದು ತಿಳಿಸಿದರು.

## ಬೆಂಗಳೂರು: ಜೆಡಿಎಸ್ ಕಚೇರಿ ಗೋಡೆ ಮೇಲೆ ವಿದ್ಯುತ್ ಕಳ್ಳ ಕುಮಾರಸ್ವಾಮಿ ಪೋಸ್ಟರ್

ಬೆಂಗಳೂರು: ವಿದ್ಯುತ್ ಕಳವು ಆರೋಪದಲ್ಲಿ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರ ವಿರುದ್ಧ ಎಫ್‌ಐಆರ್ ದಾಖಲಾದ ಬೆನ್ನಲ್ಲೇ ಜೆಡಿಎಸ್ ಕಚೇರಿ ಜೆಪಿ ಭವನಕ್ಕೆ 'ಕರೆಂಟ್ ಕಳ್ಳ ಕುಮಾರಸ್ವಾಮಿ', 'ವಿದ್ಯುತ್ ಕಳ್ಳ ಕುಮಾರಸ್ವಾಮಿ' ಎನ್ನುವ ಬರಹವುಳ್ಳ ಅವಹೇಳನಕಾರಿ ಪೋಸ್ಟರ್ ಅಂಟಿಸಿರುವುದು ಕಂಡುಬಂದಿದೆ.

ಮನೆ ದೀಪಾಲಂಕಾರಕ್ಕೆ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದ ಆರೋಪದಲ್ಲಿ ಮಾಜಿ ಸಿಎಂ ಮೇಲೆ ಬೆಸ್ಕಾಂ ಜಾಗೃತ ದಳ ಪ್ರಕರಣದ ದಾಖಲಿಸಿಕೊಂಡಿತ್ತು. ಹೀಗಾಗಿ ಎಚ್‌ಡಿಕೆ ಅವರನ್ನು ವ್ಯಂಗ್ಯವಾಡಲು ಕಿಡಿಗೇಡಿಗಳು ಪೋಸ್ಟರ್ ಅಂಟಿಸಿದ್ದಾರೆ. ಕುಮಾರಸ್ವಾಮಿ ಕರೆಂಟ್ 200 ಯುನಿಟ್ ಮಾತ್ರ ಉಚಿತ ನೆನಪಿಟ್ಟುಕೊಳ್ಳಿ, ಹೆಚ್ಚು ಕದಿಯಬೇಡಿ. ಕರೆಂಟ್ ಕದ್ದರೂ ಎಚ್‌ಡಿಕೆ ಪ್ರಾಮಾಣಿಕತೆಯನ್ನು ಮೆಚ್ಚಲೇಬೇಕು ಎಂದು ಪೋಸ್ಟರ್‌ಗಳಲ್ಲಿ ಬರೆಯಲಾಗಿದೆ. ಈ ನಡುವೆ ಪೋಸ್ಟರ್ ಕುರಿತು ಜೆಡಿಎಸ್ ಕಾರ್ಯಕರ್ತರು ಆಕ್ರೋಶ ಹೊರಹಾಕಿದ್ದು, ವಿಚಾರ ತಿಳಿಯುತ್ತಿದ್ದಂತೆಯೇ ಸ್ಥಳಕ್ಕಾಗಮಿಸಿದ ಪೊಲೀಸರು ಪೋಸ್ಟರ್ ತೆಗೆಯುವ ಕೆಲಸ ಮಾಡಿದರು.



ಕುಮಾರಸ್ವಾಮಿ ವಿರುದ್ಧ ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿ ಜಯನಗರದ ಬೆಸ್ಕಾಂ ಜಾಗೃತ ದಳದ ಅಧಿಕಾರಿಗಳು ಭಾರತೀಯ ವಿದ್ಯುತ್ ಕಾಯ್ದೆ 135ರ ಅಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಎಫ್‌ಐಆರ್ ದಾಖಲಾಗಿದೆ. ಕುಮಾರಸ್ವಾಮಿ ಅವರ ನಿವಾಸಕ್ಕೆ ಅಕ್ರಮವಾಗಿ ವಿದ್ಯುತ್ ಬಳಸಿದ ವಿಚಾರ ರಾಜ್ಯ ರಾಜಕೀಯದಲ್ಲಿ ಕೋಲಾಹಲಕ್ಕೆ ಕಾರಣವಾಗಿದೆ.

ಈ ವಿಚಾರವಾಗಿ ಕುಮಾರಸ್ವಾಮಿ ಈಗಾಗಲೇ ಸ್ಪಷ್ಟನೆ ನೀಡಿದ್ದು, ತಮ್ಮ ಅರಿವಿಗೆ ಬಾರದೆ ಪ್ರಮಾದವಾಗಿದೆ. ಬೆಸ್ಕಾಂ ಅಧಿಕಾರಿಗಳ ತನಿಖೆಗೆ ಸಹಕರಿಸುವೆ. ದಂಡ ಪಾವತಿಸುವೆ ಎಂದು ಹೇಳಿದ್ದಾರೆ.

## ನೀರು ಸಂಸ್ಕರಣಾ ಘಟಕ: ರೈತರ ಪರ ಧ್ವನಿ ಎತ್ತಿದ ಸಚಿವರು

### ಹೆಚ್ಚಿನ ಪರಿಹಾರ ನೀಡಲು ಕೋರಿ ಹೊಸದಾಗಿ ಪ್ರಸ್ತಾವನೆ ಸಲ್ಲಿಸಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ

ಬೆಳಗಾವಿ: ಒಳಚರಂಡಿ ನೀರು ಸಂಸ್ಕರಣಾ ಘಟಕ ನಿರ್ಮಾಣಕ್ಕಾಗಿ ಜಮೀನು ನೀಡಿರುವ ಹಲಗಾ ಗ್ರಾಮದ ರೈತರ ಪರವಾಗಿ ಗಟ್ಟಿಯಾಗಿ ಧ್ವನಿ ಎತ್ತಿರುವ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಹೆಚ್ಚಿನ ಪರಿಹಾರ ನೀಡುವಂತೆ ಕೋರಿ ಸರಕಾರಕ್ಕೆ ಹೊಸದಾಗಿ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ, ರೈತರ ಅಹವಾಲು ಆಲಿಸಿದ ನಂತರ ಅವರು ಈ ವಿಷಯ ತಿಳಿಸಿದರು. ಜಮೀನು ಸ್ವಾಧೀನ ಪಡಿಸಿಕೊಳ್ಳುವಾಗ ರೈತರಿಗೆ ಎಕರೆಗೆ 3 ಲಕ್ಷ ರೂ ಪರಿಹಾರ ನೀಡಲು ಪ್ರಸ್ತಾವಿಸಲಾಗಿತ್ತು. ಆದರೆ ಅಲ್ಲಿನ ರೈತರಿಗೆ ಬೆಳೆ ಪರಿಹಾರವಾಗಿ ವರ್ಷಕ್ಕೆ 3.60 ಲಕ್ಷ ರೂಗಳನ್ನು ಸರಕಾರವೇ ನೀಡಿದೆ. ಹಾಗಾಗಿ ರೈತರ ಕೋರಿಕೆಯಂತೆ ಎಕರೆಗೆ 4 ಕೋಟಿ ರೂ ಪರಿಹಾರ ನೀಡುವಂತೆ ಜಿಲ್ಲಾಡಳಿತದಿಂದ ಮತ್ತು ಮಹಾನಗರ ಪಾಲಿಕೆಯಿಂದ ಪ್ರತ್ಯೇಕ ಪ್ರಸ್ತಾವನೆ ಸಲ್ಲಿಸಬೇಕು. ಜೊತೆಗೆ ಆ ಸಂದರ್ಭದಲ್ಲಿ ರೈತರಿಗೆ ನೀಡಲಾಗಿರುವ ಎಲ್ಲ ಭರವಸೆಗಳನ್ನೂ ಈಡೇರಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ರೈತರಿಗೆ ಯಾವುದೇ ಕಾರಣದಿಂದ ಅನ್ಯಾಯವಾಗಬಾರದು.



ಈ ಹಿಂದಿನ ಸಭೆಗಳ ನಡಾವಳಿಗಳನ್ನು ತರಿಸಿಕೊಂಡು ಸಮಗ್ರವಾಗಿ ಪರಿಶೀಲನೆ ನಡೆಸಲಾಗಿದೆ. ರೈತರಿಂದಲೂ ಅಹವಾಲು ಆಲಿಸಲಾಗಿದೆ. 2017ರಲ್ಲಿ ಆಗಿನ ನಗರಾಭಿವೃದ್ಧಿ ಸಚಿವರು, ಸರಕಾರದ ಜೊತೆಗೆ ಮಹಾನಗರ ಪಾಲಿಕೆಯಂದಲೂ ಪರಿಹಾರ ನೀಡುವಂತೆ ಆದೇಶಿಸದ್ದ ಹಾರು. ಹಾಗಾಗಿ ಹೊಸದಾಗಿ ಪ್ರಸ್ತಾವನೆ ಪಡೆದು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿ ಆದಷ್ಟು ಬೇಗ ರೈತರಿಗೆ ಹೆಚ್ಚಿನ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಸರಕಾರ ಮತ್ತು ಮಹಾನಗರ ಪಾಲಿಕೆಯಿಂದಲೂ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ರೈತರಿಗೆ ಭರವಸೆ ನೀಡಿದರು.

ರೈತರಿಗೆ ಹೆಚ್ಚಿನ ಪರಿಹಾರ, ಉದ್ಯೋಗ ಮತ್ತು ಮಳಿಗೆ ನೀಡುವ ಭರವಸೆಯನ್ನು ಆಗಿನ ಜಿಲ್ಲಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು ನೀಡಿದ್ದರು. ಆದರೆ ರೈತರಿಗೆ ಅನ್ಯಾಯವಾಗಿದೆ. ಮುಂದೆ ಯಾವುದೇ ಕಾರಣದಿಂದ ರೈತರಿಗೆ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಬೇಕು. ಪೊಲೀಸರೂ ಸಹ ರೈತರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಸಚಿವೆ ಹೆಬ್ಬಾಳಕರ್ ಸೂಚಿಸಿದರು.

ರೈತರ ಪರವಾಗಿ ಧ್ವನಿ ಎತ್ತಿರುವುದಕ್ಕಾಗಿ ಈ ಸಂದರ್ಭದಲ್ಲಿ ಸಚಿವರಿಗೆ ರೈತರು ಧನ್ಯವಾದಗಳನ್ನು ಸಲ್ಲಿಸಿದರು.

ಜಿಲ್ಲಾಧಿಕಾರಿ ನಿತೇಶ ಪಾಟೀಲ ಮಾತನಾಡಿ, ಈ ಹಿಂದಿನ ಸಭೆಗಳ ನಡಾವಳಿಗಳನ್ನು ಪರಿಶೀಲಿಸಿ ರೈತರಿಗೆ ನೀಡಲಾಗಿದ್ದ ಭರವಸೆಗಳನ್ನು ಈಡೇರಿಸಲು ಕ್ರಮ ತೆಗೆದುಕೊಳ್ಳುವಂತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಬೆಳಗಾವಿ ಉಪವಿಭಾಗಾಧಿಕಾರಿ, ತಹಸಿಲ್ದಾರ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ಹಣ ಪಡೆದು ಸೈಟ್ ಕೊಡದ ಮೈಸೂರಿನ ಬಿಲ್ಡರ್ಗೆ ದಂಡ ವಿಧಿಸಿ, ದೂರುದಾರರಿಗೆ ಪರಿಹಾರ ನೀಡಲು ಆದೇಶ

ಧಾರವಾಡ: ಧಾರವಾಡದ ಕೆ.ಎಚ್.ಬಿ. ಕಾಲೋನಿಯ ಹನುಮಂತಪ್ಪ ನಾಯಕರವರು ಮೈಸೂರಿನ ಶ್ರೀಗುರು ಮಲ್ಲೇಶರಿಯಲ್ ವ್ಯಾಲ್ಯು ಕಾರ್ಪೊರೇಟನ ಮೆಂಬರ್ ಆಗಿದ್ದರು. ಅವರು 30ಥ40 ಸೈಜಿನ ಪ್ಲಾಟಗೆ ಕಂತುಗಳ ಮೂಖಾಂತರ ಒಟ್ಟು ರೂ.3,16,800/– ತುಂಬಿದ್ದರು. ಈ ಬಗ್ಗೆ ಎದುರುದಾರರು ಸೈಟ್ ಕೊಡುವ ಬಗ್ಗೆ ಬರವಸೆ ಕೊಟ್ಟು ದಿ.07/10/2014 ರಂದು ಕರಾರು ಪತ್ರ ಬರೆದುಕೊಟ್ಟಿದ್ದರು. ಭೂಮಿ ಅಭಿವೃದ್ಧಿಗೊಳಿಸಿ ನಿಗಧಿತ ಅವಧಿಯಲ್ಲಿ ಎದುರುದಾರರು ಪ್ಲಾಟ್ನ್ನು ದೂರುದಾರರಿಗೆ ನೋಂದಣಿ ಮಾಡಿಕೊಡಬೇಕಾಗಿತ್ತು.

ಆದರೆ ಫಿರ್ಯಾದಿದಾರರಿಂದ ಎಲ್ಲ ಹಣ ಪಡೆದಿದ್ದರು ಎದುರುದಾರರು ಪ್ಲಾಟ್ನ್ನು ನೋಂದಣಿ ಮಾಡಿ ಕೊಟ್ಟಿರಲಿಲ್ಲ. ಎದುರುದಾರ ಈ ರೀತಿಯ ನಡಾವಳಿಕೆ ಗ್ರಾಹಕರ ಸಂರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ:25/11/2022 ರಂದು ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗ ದೂರುದಾರರಿಂದ ರೂ.3,16,800/– ಹಣ ಪಡೆದುಕೊಂಡು ಒಪ್ಪಂದದಂತೆ ಅವರಿಗೆ ಪ್ಲಾಟ್ನ್ನು ನೋಂದ ಮಾಡಿಕೊಡವುದು ಎದುರುದಾರರ ಕರ್ತವ್ಯವಾಗಿದೆ. 7–8 ಕಳೆದರು ಎದುರುದಾರರು ದೂರುದಾರರಿಗೆ ಪ್ಲಾಟ್ ನೋಂದ ಮಾಡಿಕೊಟ್ಟಿಲ್ಲ. ಅವರ ಹಣವನ್ನು ಎದುರುದಾರರು ವಾಪಸ್ಸು ಕೊಟ್ಟಿಲ್ಲ. ಅಂತಹ ಅವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಎಂದು ಆಯೋಗ ಅಭಿಪ್ರಾಯಪಟ್ಟು ತೀಪು ನೀಡಿದೆ. ದೂರುದಾರರಿಂದ ಹಣ ಪಡೆದು ವ್ಯವಹರಣೆ ನಡೆಸಿರುವುದರಿಂದ ದೂರುದಾರ ಗ್ರಾಹಕರ ಅರ್ಥವಿವರಣೆಯೊಳಗೆ ಬರುತ್ತಾನೆ ಅಂತಾ ಆಯೋಗ ತನ್ನ ತೀರ್ಪಿನಲ್ಲಿ ಹೇಳಿದೆ. ದೂರುದಾರರು ಸಂದಾಯ ಮಾಡಿದ ರೂ.3,16,800/– ಹಾಗೂ ಅದರ ಮೇಲೆ ಶೇ.8 ರಂತೆ 31/10/2023ರ ವರೆಗಿನ ಬಡ್ಡಿ ರೂ.1,47,840/– ಸೇರಿ ಒಟ್ಟು ರೂ.4,64,640/– ತೀಪು ನೀಡಿದ ಒಂದು ತಿಂಗಳೊಳಗಾಗಿ ದೂರುದಾರರಿಗೆ ನೀಡುವಂತೆ ಆಯೋಗ ಎದುರುದಾರರಿಗೆ ನಿರ್ದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲತೆ ಮತ್ತು ಮಾನಸಿಕ ಹಿಂಸೆಗಾಗಿ ರೂ.50 ಸಾವಿರ ಪರಿಹಾರ ಹಾಗೂ ಈ ಪ್ರಕರಣದ ಖರ್ಚು ವೆಚ್ಚ ಅಂತಾ ರೂ.10,000/– ನೀಡುವಂತೆ ಎದುರುದಾರರಿಗೆ ಆಯೋಗ ತನ್ನ ತೀರ್ಪಿನಲ್ಲಿ ಆದೇಶಿಸಿದೆ.

# ಧನಸಹಾಯಕ್ಕೆ ಅರ್ಜಿ ಆಹ್ವಾನ

ಧಾರವಾಡ: ನಾಡಿನ ಕಲೆ, ಸಾಹಿತ್ಯ, ಸಂಗೀತ, ಜನಪದ, ನೃತ್ಯ, ನಾಟಕ ಸೇರಿದಂತೆ ಇತರೆ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2023–23ನೇ ಸಾಲಿನ ಸಾಮಾನ್ಯ, ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ, ಕನ್ನಡ ಭಾಷೆ, ಸಾಹಿತ್ಯ, ಸಂಗೀತ, ನೃತ್ಯ, ಜಾನಪದ, ನಾಟಕ, ಯಕ್ಷಗಾನ, ಚಿತ್ರಕಲೆ, ಶಿಲ್ಪಕಲೆ ಮುಂತಾದ ಸೃಜನಶೀಲ ಕಲಾಪ್ರಕಾರಗಳಲ್ಲಿ ನಿರಂತರ ಸಂಸ್ಕೃತಿ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಘ ಸಂಸ್ಥೆಗಳಿಗೆ ಪ್ರೋತ್ಸಾಹ ರೂಪದಲ್ಲಿ ಧನಸಹಾಯ ನೀಡಲು ಸೇವಾಸಿಂಧು Sevasindhu.karnataka.gov.in ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಡಿಸೆಂಬರ್ 13 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್ಸೈಟ್ www.kannadasiri.karnataka.gov.in 08022279954, 9986837037, 8792662814, 8792662816, 08022213530 ಅನ್ನು ಹಾಗೂ ಆಯಾ ಜಿಲ್ಲೆಯ ವ್ಯವಸ್ಥಾಪಕರು, ಸೇವಾ ಸಿಂಧು ಇವರನ್ನು ಸಂಪರ್ಕಿಸಬಹುದಾಗಿದೆ.

ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅರ್ಜಿಗಳನ್ನು ನೇರವಾಗಿ ಇಲಾಖೆಯಲ್ಲಿ ಸ್ವೀಕರಿಸುವುದಿಲ್ಲವೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಪ್ರಶಸ್ತಿ ಆಯ್ಕೆಗೆ ಅರ್ಜಿ ಆಹ್ವಾನ

ಧಾರವಾಡ: ಧಾರವಾಡ ಜಿಲ್ಲೆಯ ಕೃಷಿ ವಲಯದಲ್ಲಿ ಉತ್ಪಾದಕತೆ ಹೆಚ್ಚಿಸಲು ಹಾಗೂ ರೈತರಲ್ಲಿ ಸ್ಪರ್ಧಾ ಮನೋಭಾವ ಬೆಳೆಸಲು ಕೃಷಿ ಇಲಾಖೆ ಧಾರವಾಡ 2023–24 ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ರಾಜ್ಯ, ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ನಿಗದಿಪಡಿಸಿದ ವಿವಿಧ ಬೆಳೆಗಳಲ್ಲಿ ಬೆಳೆ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಆಸಕ್ತಿಯುಳ್ಳ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಅವಶ್ಯಕ ದಾಖಲಾತಿಗಳೊಂದಿಗೆ ಸಂಬಂಧಿಸಿದ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯಕ್ಕೆ ನವೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಅರ್ಜಿ ನಮೂನೆ, ಪ್ರವೇಶ ಶುಲ್ಕ ಭರಣಾ ಮಾಡುವುದು.

ಬೆಳೆ ಕಟಾವು ಮಾಡುವ ವಿಧಾನ, ಸ್ಪರ್ಧಾತ್ಮಕ ಇಳುವರಿಯ ಮಾಹಿತಿ ಇತ್ಯಾದಿಗಳ ಬಗ್ಗೆ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ, ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಬೆಳೆ ಸ್ಪರ್ಧೆಯಲ್ಲಿ ಭಾಗವಹಿಸಲು ಸಾಮಾನ್ಯ ವರ್ಗದ ರೈತರಿಗೆ 100/– ರೂ.ಶುಲ್ಕ ಇದ್ದು, ಪರಿಶಿಷ್ಟ ಜಾತಿ, ಪರಿಶಿಷ್ಟಪಂಗಡ ವರ್ಗದ ರೈತರಿಗೆ ರೂ.25/–ಶುಲ್ಕ ಇರುತ್ತದೆ. ರಾಜ್ಯ ಮಟ್ಟದ ಬೆಳೆ ಸ್ಪರ್ಧೆಗೆ ಹಿಂಗಾರು ಹಂಗಾಮಿಗೆ ಜೋಳ (ಮಳೆ ಆಶ್ರಿತ) ಮತ್ತು ಕಡಲೆ (ಮಳೆ ಆಶ್ರಿತ) ಬೆಳೆಗಳನ್ನು ನಿಗದಿಪಡಿಸಲಾಗಿದೆ.

ಜಿಲ್ಲಾಮಟ್ಟದ ಬೆಳೆ ಸ್ಪರ್ಧೆಗೆ ಹಿಂಗಾರು ಹಂಗಾಮಿಗೆ ಕಡಲೆ (ಮಳೆ ಆಶ್ರಿತ) ನಿಗದಿಪಡಿಸಲಾಗಿದೆ.

ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಸಂಬಂಧಿಸಿದಂತೆ ಧಾರವಾಡ, ಹುಬ್ಬಳ್ಳಿ, ಹುಬ್ಬಳ್ಳಿ ನಗರ, ನವಲಗುಂದ, ಅಣ್ಣಿಗೇರಿ ಹಾಗೂ ಕುಂದಗೋಳ ತಾಲ್ಲೂಕುಗಳಿಗೆ ಕಡಲೆ (ಮಳೆಆಶ್ರಿತ) ಬೆಳೆ ನಿಗದಿ ಪಡಿಸಲಾಗಿದೆ. ಈ ಸ್ಪರ್ಧೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದು.

2023–24 ನೇ ಸಾಲಿನಲ್ಲಿ ಕೃಷಿಯಲ್ಲಿ ರೈತ ಮಹಿಳೆಯರನ್ನು ಪ್ರೇತ್ಸಾಹಿಸುವ ಹಾಗೂ ಇತರೆ ಮಹಿಳೆಯರನ್ನು ಕೃಷಿಯತ್ತ ಆಕರ್ಷಿಸಲು ಪ್ರತ್ಯೇಕವಾಗಿ ಮಹಿಳೆಯರಿಗೆ ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತರು, ರೈತ ಮಹಿಳೆಯರು ನವೆಂಬರ್ 30 ರೊಳಗಾಗಿ ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರಿಗೆ ಅರ್ಜಿ ಸಲ್ಲಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.18 ರಿಂದ 10 ದಿನಗಳ ಉದ್ಯಮ ಶೀಲತಾ ತರಬೇತಿ ಕಾರ್ಯಕ್ರಮ

ಧಾರವಾಡ: ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಇವರು ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸುವ ಪರಿಶಿಷ್ಟ ಜಾತಿಯ ಪುರುಷ ಮತ್ತು ಮಹಿಳೆಯರಿಗೆ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ನವೆಂಬರ್ 18 ರಂದು ರಾಯಾಪೂರದ ಜಿಲ್ಲಾಕೈಗಾರಿಕಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು, ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ಜಂಟಿ ನಿರ್ದೇಶಕರ ಕಛೇರಿ ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರ, ರಾಯಾಪೂರ, ಧಾರವಾಡ ದೂ.ಸಂ: 8792343840 ಸಂಪರ್ಕಿಸಬಹುದೆಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಲ್ಲಿ ಅತಿಸಾರದಿಂದ ನಿರ್ಜಲೀಕರಣ ಉಂಟಾಗಿ ಜೀವಕ್ಕೆ ಅಪಾಯ ಆಗಬಹುದು; ನಿರ್ಲಕ್ಷ್ಯ ಮಾಡದೆ ಪಾಲಕರು ಜಾಗೃತಿ ವಹಿಸಬೇಕು: ಸಿಇಓ ಸ್ವರೂಪ ಟಿ.ಕೆ.

ಧಾರವಾಡ: ಮಕ್ಕಳಲ್ಲಿ ಅತಿಸಾರದಿಂದ ನಿರ್ಜಲೀಕರಣ ಉಂಟಾಗಿ ಮಕ್ಕಳ ಜೀವಕ್ಕೆ ಅಪಾಯವಾಗಬಹುದು. ಪಾಲಕರು ನಿರ್ಲಕ್ಷ್ಯ ವಹಿಸದೆ ಜಾಗೃತರಾಗಿ, ನಿಗಧಿತ ಪ್ರಮಾಣದ ಓಆರ್ಎಸ್ ದ್ರಾವಣ ಮತ್ತು ಝಿಂಕ್ ಮಾತ್ರೆ ನೀಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಹೇಳಿದರು.




ಅವರು ನ.1 ಬೆಳಿಗ್ಗೆ ಜಿಲ್ಲಾ ಆಸ್ಪತ್ರೆಯ ತಾಯಿ ಮಕ್ಕಳ ಆಸ್ಪತ್ರೆ ವಾರ್ಡ್ನಲ್ಲಿ ತೀವ್ರತರ ಅತಿಸಾರ ನಿಯಂತ್ರಣ ರಾಷ್ಟ್ರೀಯ ನವಜಾತ ಶಿಶು ಸಪ್ತಾಹ ಹಾಗೂ ಸ್ಯಾನ್ಸ್ (SAANS) ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದರು.

ಅತಿಸಾರದಿಂದ ನಿರ್ಜಲೀಕರಣವಾಗಿ ಅದು, ಮಕ್ಕಳಿಗೆ ಮಾರಣಾಂತಿಕವಾಗಬಹುದು.ಇದನ್ನು ಸರಿಯಾದ ಪ್ರಮಾಣದಲ್ಲಿ ಓಆರ್ಎಸ್ ಮತ್ತು ಝಿಂಕ್ (ORS–ZINC) ಮಾತ್ರೆಗಳನ್ನು ನೀಡುವುದರ ಮೂಲಕ ತಡೆಗಟ್ಟಬಹುದೆಂದು ಅವರು ತಿಳಿಸಿದರು.

ತೀವ್ರತರ ಅತಿಸಾರ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮದ ಮೂಲ ಉದ್ದೇಶ "ಅತಿಸಾರ ಭೇದಿಯಿಂದ ಬಾಲ್ಯದ ಸಾವುಗಳ ಶೂನ್ಯಗೊಳಿಸುವುದರ ಕಡೆಗೆ ತೀವ್ರ ಪ್ರಯತ್ನ" ವಾಗಿದೆ ಎಂದು ಅವರು ತಿಳಿಸಿದರು.

ನವೆಂಬರ್ 15 ರಿಂದ 21 ರವರೆಗೆ ಜಿಲ್ಲೆಯಲ್ಲಿ ರಾಷ್ಟ್ರೀಯ ನವಜಾತ ಶಿಶು ಸಪ್ತಾಹವನ್ನು ಆಚರಿಸಲಾಗುತ್ತಿದೆ. ಸಪ್ತಾಹವು ಸಮುದಾಯ ಸೌಲಭ್ಯ ತೊಡಗಿಸಿಕೊಳ್ಳುವಿಕೆಯ ಮೂಲಕ ಶಿಶುವನ್ನು ಪೇಷಿಸುವುದು ಎಂಬ ವಿಷಯ ವಸ್ತು ಒಳಗೊಂಡಿದೆ. ನವಜಾತ ಶಿಶುವಿಗೆ ಉತ್ತಮ ಆರೈಕೆ ನೀಡುವುದರ ಮೂಲಕ ನವಜಾತ ಶಿಶುವಿನ ಮರಣ ಪ್ರಮಾಣ ಕಡಿಮೆ ಮಾಡಬಹುದು. ಈ ನಿಟ್ಟಿನಲ್ಲಿ ಗರ್ಭಿಣಿಯರಲ್ಲಿ, ನವಜಾತ ಪಾಲಕರಲ್ಲಿ ತಿಳುವಳಿಕೆ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ: ಪಾಟೀಲ ಶಶಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳಲ್ಲಿ ಅತಿಸಾರ ಉಂಟಾಗದಂತೆ ಮಾಡುವಲ್ಲಿ ಶುಚಿತ್ವದ ಪಾತ್ರ ಮುಖ್ಯವಾಗಿದೆ. ಆಹಾರ ತಯಾರಿಕೆ, ಕೈ, ಬಟ್ಟೆಗಳಲ್ಲಿ ಸ್ವಚ್ಚತೆ ಕಾಪಾಡಿಕೊಳ್ಳುವುದರ ಮೂಲಕ ಮಕ್ಕಳಲ್ಲಿ ಅತಿಸಾರ ಉಂಟಾಗದಂತೆ ನೋಡಿಕೊಳ್ಳಬಹುದು ಎಂದು ಹೇಳಿದರು.

ಮಗುವಿಗೆ ಅತಿಸಾರ ಉಂಟಾದಾಗ ಓಆರ್ ಎಸ್ ನೀಡುವುದರ ಮೂಲಕ ನಿರ್ಜಲೀಕರಣ ಆಗದಂತೆ ತಡೆಯಬೇಕು. ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಉಚಿತ ಚಿಕಿತ್ಸೆ ಪಡೆದುಕೊಳ್ಳಲು ಎಂದು ಡಾ.ಪಾಟೀಲ ಶಶಿ ಅವರು ತಿಳಿಸಿದರು.

ಜಿಲ್ಲೆಯಲ್ಲಿ ತೀವ್ರತರ ಅತಿಸಾರ ನಿಯಂತ್ರಣ (ಐಡಿಸಿಎಫ್) ಪಾಕ್ಷಿಕವನ್ನು ನವೆಂಬರ್ 15 ರಿಂದ 28 ರವರೆಗೆ ಎಲ್ಲ ಆರೋಗ್ಯ ಕೇಂದ್ರ, ಉಪಕೇಂದ್ರಗಳಲ್ಲಿ ಹಮ್ಮಿಕೊಂಡಿದ್ದು, ಆಶಾ ಹಾಗೂ ಆರೋಗ್ಯ ಕಾರ್ಯಕರ್ತೆಯರ ಮೂಲಕ ಐಡಿಸಿಎಫ್ ಪಾಕ್ಷಿಕ ಕುರಿತಂತೆ ಪ್ರಾಥಮಿಕ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಾಗಿ ಅವರು ತಿಳಿಸಿದರು.

ಮಕ್ಕಳಲ್ಲಿ ನ್ಯೂಮೋನಿಯಾವನ್ನು ಯಶಸ್ವಿಯಾಗಿ ಕೊನೆಗೊಳಿಸಲು ಸಾಮಾಜಿಕ ಜಾಗೃತಿ ಹಾಗೂ 2023 ಕಾರ್ಯಕ್ರಮ ಹಮ್ಮಿಕೊಂಡಿದ್ದು, ನ್ಯೂಮೋನಿಯಾ ಕಾಯಿಲೆಯು 5 ವರ್ಷದ ಒಳಗಿನ ಮಕ್ಕಳಿಗೆ ಮರಣಕರವಾಗಿದ್ದು, ಇದರ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಮತ್ತು ಪಿಸಿವಿ ಲಸಿಕೆಯ ಮಹತ್ವವನ್ನು ತಿಳಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ: ಸಂಗಪ್ಪ ಗಾಬಿ ಅವರು ಮಾತನಾಡಿ, ಪಾಲಕರು ಮಕ್ಕಳನ್ನು ಬೇಗನೆ ಆಸ್ಪತ್ರೆಗೆ ಕರೆದುಕೊಂಡು ಬಂದು ಸೂಕ್ತ ಚಿಕಿತ್ಸೆಯನ್ನು ಪಡೆಯುವುದರಿಂದ ಮಗುವಿಗೆ ಪ್ರಾಣಾಪಾಯವಾಗುವುದನ್ನು ತಪ್ಪಿಸಬಹುದು ಎಂದು ತಿಳಿಸಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ನುರಿತ ಮಕ್ಕಳ ತಜ್ಞ ವೈದ್ಯರು ಹಾಗೂ ಉತ್ತಮ ಸೌಲಭ್ಯಗಳಿದ್ದು, ಉಚಿತ ಚಿಕಿತ್ಸೆ ಲಭ್ಯವಿದೆ. ಸಾರ್ವಜನಿಕರು ಇದರ ಉಪಯೋಗವನ್ನು ಪಡೆಯಲು ತಿಳಿಸಿದರು.

ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಒಟ್ಟು 100 ಹಾಸಿಗೆಗಳಿದ್ದು, 90 ಹಾಸಿಗೆಗಳು ತಾಯಿಗೆ ಮತ್ತು 10 ನವಜಾತ ಶಿಶುಗಳ ಚಿಕಿತ್ಸೆಗೆ ಮಾಡಲಾಗಿದೆ. ಮತ್ತು ಇದರೊಂದಿಗೆ 30 ಹಾಸಿಗೆಗಳನ್ನು ವಿವಿಧ ರೀತಿಯ ರೋಗಗಳಿಂದ ಬಳಲುತ್ತಿರುವ 12 ವರ್ಷದೊಳಗಿನ ಮಕ್ಕಳಿಗೆ ಪ್ರತ್ಯೇಕವಾಗಿ ಮೀಸಲಿಡಲಾಗಿದೆ ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ ಅವರು ತಿಳಿಸಿದರು.

ಅತಿಸಾರದ ಕಾರಣಗಳು ಮತ್ತು ಮುಂಜಾಗ್ರತೆಯ ಕ್ರಮಗಳು, ಚಿಕಿತ್ಸೆ ಕುರಿತಂತೆ ಮಕ್ಕಳ ತಜ್ಞ ವೈದ್ಯರಾದ ಡಾ.ಸಿ.ಎನ್. ನಾಡಗೌಡ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ.ಟಿ.ಎ. ಶೆಪೂರ, ಡಾ.ಪ್ರಸನ್ನ, ಡಾ.ವಿಕ್ರಮ ಗೌಡರ, ಡಾ.ಪೀರ್ದೋಷ ಖಾನ ಹಾಗೂ ಜಿಲ್ಲಾ ಆಸ್ಪತ್ರೆಯ ತಜ್ಞ ವೈದ್ಯರು, ಸ್ನಾತಕೋತ್ತರ ವಿದ್ಯಾರ್ಥಿಗಳು, ರೋಗಿಗಳ ಸಂಬಂಧಿಕರು, ತಾಯಂದಿರು, ಪಾಲಕರು, ಜಿಲ್ಲಾ ಆಸ್ಪತ್ರೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾ ಆರ್ಸಿ.ಹೆಚ್ ಅಧಿಕಾರಿ ಡಾ.ಸುಜಾತಾ ಹಸವಿಮಠ ಸ್ವಾಗತಿಸಿದರು. ಜರೀನಾ ಮುಲ್ಲಾನವರ ಪ್ರಾರ್ಥಿಸಿದರು. ರೇಣುಕಾ ಮಲ್ಲನಗೌಡರ ಕಾರ್ಯಕ್ರಮ ನಿರೂಪಿಸಿದರು. ಅಶೋಕ ಬೆಟದೂರ ವಂದಿಸಿದರು.

# ರೈಲ್ವೆ ನಿಲ್ದಾಣದ ಪ್ಲಾಟ್ ಫಾರ್ಮ್ನಲ್ಲೇ ರೈಲ್ವೆ ಸಿಬ್ಬಂದಿ ಆತ್ಮಹತ್ಯೆ

ಕಲಬುರಗಿ: ರೈಲ್ವೆ ನಿಲ್ದಾಣದ ಪ್ಲಾಟ್ ಫಾರ್ಮ್ನಲ್ಲಿ ರೈಲ್ವೆ ಇಲಾಖೆ ಸಿಬ್ಬಂದಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಿತ್ತಾಪುರ ತಾಲೂಕಿನ ವಾಡಿ ಪಟ್ಟಣದ ರೈಲ್ವೆ ಜಂಕ್ಷನ್ನಲ್ಲಿ ನಡೆದಿದೆ.

ಪಕ್ಕದ ಮಹಾರಾಷ್ಟ್ರ ರಾಜ್ಯದ ಸೋಲಾಪುರ ನಿವಾಸಿ ಮಲ್ಲಿನಾಥ ದೋಶೆಟ್ಟಿ (38) ಆತ್ಮಹತ್ಯೆ ಮಾಡಿಕೊಂಡಿರುವ ಸಿಬ್ಬಂದಿ ಎಂದು ಗುರುತಿಸಲಾಗಿದೆ. ಮೃತ ಮಲ್ಲಿನಾಥ ವಾಡಿ ರೈಲ್ವೆಯ ಎಸ್ಎನ್ಟಿ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಕಳೆದ ಕೆಲ ದಿನಗಳಿಂದ ಕೆಲಸಕ್ಕೆ ಗೈರು ಹಾಜರಾಗಿದ್ದ ಮಲ್ಲಿನಾಥ, ಕಾಣೆಯಾಗಿದ್ದಾನೆ ಎಂದು ಪೋಷಕರು ಅ.17 ರಂದು ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಹಿನ್ನೆಲೆಯಲ್ಲಿ ಭಾನುವಾರ ರಾಯಚೂರು ನಗರದಲ್ಲಿ ವಾಡಿ ಪೊಲೀಸರು ಪತ್ತೆ ಹಚ್ಚಿ ವಾಡಿ ಪೊಲೀಸ್ ಠಾಣೆಗೆ ಕರೆತಂದು ಪೋಷಕರಿಗೆ ಒಪ್ಪಿಸಿದ್ದರು. ಸೋಮವಾರ ವಾಡಿ ರೈಲ್ವೆ ಪ್ಲಾಟ್ ಫಾರ್ಮ–1ರಲ್ಲಿ




ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ವಿಷಯ ತಿಳಿಯುತ್ತಿದ್ದಂತೆಯೇ ರೈಲ್ವೆ ಠಾಣೆ ಪಿಎಸ್ಐ ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದು, ತನಿಖೆ ನಡೆಸುತ್ತಿದ್ದಾರೆ. ಈ ಕುರಿತು ವಾಡಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಸ್ ಚಾಲಕರಿಗೆ ಖಡಕ್ ಎಚ್ಚರಿಕೆ ನೀಡಿದ ಸಾರಿಗೆ ಇಲಾಖೆ

ಬೆಂಗಳೂರು: ಕೆಎಸ್ಆರ್ಟಿಸಿ ಹಾಗೂ ಬಿಎಂಟಿಸಿ ಬಸ್ ಚಾಲಕರಿಗೆ ಸಾರಿಗೆ ಇಲಾಖೆ ಖಡಕ್ ಎಚ್ಚರಿಕೆ ನೀಡಿದೆ.

ಕೆಎಸ್ಆರ್ಟಿಸಿ ಹಾಗೂ ಬಿಎಂಟಿಸಿ ಬಸ್ನಲ್ಲಿ ಚಾಲಕರು ಹೆಡ್ಫೋನ್ ಹಾಕಿಕೊಂಡು ಸಾಂಗ್ ಕೇಳುತ್ತಾ ಬ್ಲಷ್ ಡ್ರೈವ್ ಮಾಡಿದ್ರೆ ಕೆಲಸದಿಂದ ವಜಾ ಮಾಡಲಾಗುತ್ತೆ ಅಂತಾ ಸಾರಿಗೆ ಇಲಾಖೆ ಎಚ್ಚರಿಕೆ ನೀಡಿದೆ.

ಪ್ರಯಾಣಿಕರಿಂದ ಈ ಬಗ್ಗೆ ನಿರಂತರ ದೂರು ಬಂದ ಹಿನ್ನೆಲೆಯಲ್ಲಿ ಸಾರಿಗೆ ಇಲಾಖೆ ಎಚ್ಚೆತ್ತುಕೊಂಡು ಈ ನಿರ್ಧಾರ ಕೈಗೊಂಡಿದೆ.



ಅಲ್ಲದೇ KSRTC ಮತ್ತು BMTC ಸೇರಿ ನಾಲ್ಕು ನಿಗಮದಲ್ಲಿ ಅಪಘಾತ ಸಂಖ್ಯೆ ಹೆಚ್ಚಾಗ್ತಿರೋದನ್ನು ತಡೆಯೋದು ಕೂಡ ಸಾರಿಗೆ ಇಲಾಖೆ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಅಪಘಾತ ರಹಿತ ಚಾಲನೆಗೆ ಸಾರಿಗೆ ಇಲಾಖೆಯಿಂದ ಮಹತ್ವದ ಆದೇಶ ಹೊರಡಿಸಲಾಗಿದೆ.

# ಉತ್ತರ ಕನ್ನಡ: ಅನಾರೋಗ್ಯದಿಂದ ಬಳಲುತ್ತಿದ್ದ ಮಗನ ಆತ್ಮಹತ್ಯೆಯಿಂದ ನೊಂದು ಪ್ರಾಣಕಳೆದುಕೊಂಡ ತಾಯಿ–ಮಗಳು

ಉತ್ತರ ಕನ್ನಡ: ಉತ್ತರ ಕನ್ನಡ ಜಿಲ್ಲೆಯಲ್ಲಿ ಅನಾರೋಗ್ಯದಿಂದ ಬಳಲುತ್ತಿದ್ದ ತನ್ನ ಮಗ ಆತ್ಮಹತ್ಯೆ ಮಾಡಿಕೊಂಡ ಕೆಲವೇ ಗಂಟೆಗಳ ನಂತರ ಮಹಿಳೆ ಮತ್ತು ಆಕೆಯ ಮಗಳು ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ಮಂಗಳವಾರ ನಡೆದಿದೆ.

ಮೃತರನ್ನು 50 ವರ್ಷದ ನರ್ಮದಾ ಮತ್ತು ಅವರ 25 ವರ್ಷದ ಮಗಳು ದಿವ್ಯಾ ಎಂದು ಗುರುತಿಸಲಾಗಿದೆ. ಶಿರಸಿ ತಾಲೂಕಿನ ತರಗೋಡು ಬೆಳಾಲೆ ಗ್ರಾಮದಲ್ಲಿ ಘಟನೆ ವರದಿಯಾಗಿದೆ.

ನರ್ಮದಾ ಅವರ 22 ವರ್ಷದ ಮಗ ಬಾಲಚಂದ್ರ




ಹೆಗಡೆ ಅವರು ಕೋವಿಡ್ ಸಮಯದಲ್ಲಿ ಅನಾರೋಗ್ಯಕ್ಕೆ ಒಳಗಾಗಿದ್ದರು ಮತ್ತು ಕೋವಿಡ್ ನಂತರವೂ ಅವರು ಗುಣಮುಖರಾಗಿರಲಿಲ್ಲ. ನರ್ಮದಾ ಮತ್ತು ದಿವ್ಯಾ ಅವರ ಚಿಕಿತ್ಸೆಗಾಗಿ ದಿನನಿತ್ಯ ಓಡಾಡುತ್ತಿದ್ದರು.

ಬಾಲಚಂದ್ರ ಹೆಗಡೆ ಪಟ್ಟಣದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಮತ್ತೆ ಗ್ರಾಮಕ್ಕೆ ಬಂದು ಮನೆಯಲ್ಲಿ ಚಿಕಿತ್ಸೆ ಮುಂದುವರಿಸಿದ್ದರು. ಮಂಗಳವಾರ ಬೆಳಗ್ಗೆ ಮನೆಯಲ್ಲಿ ನೋವು ತಾಳಲಾರದೆ ಆತ್ಮಹತ್ಯೆ ಮಾಡಿಕೊಂಡಿದ್ದರು.

ಬಾಲಚಂದ್ರ ಹೆಗಡೆ ಅವರ ಪಾರ್ಥಿವ ಶರೀರದ ಮುಂದೆ ರೋದಿಸುತ್ತಿದ್ದ ತಾಯಿ ಮತ್ತು ಮಗಳು ಮನೆಯೊಳಗೆ ಹೋಗಿ ತಾವು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಶಿರಸಿ ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

# ನ.20 ರಂದು ಮಿನಿ ಉದ್ಯೋಗ ಮೇಳ

ಬೆಳಗಾವಿ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ನವ್ಹೆಂಬರ್ 20, 2023 ರಂದು ಬೆಳಿಗ್ಗೆ 10 ರಿಂದ ಮದ್ಯಾಹ್ನ 1 ಗಂಟೆಯವರೆಗೆ, ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಪದವಿ ವಿದ್ಯಾರ್ಹತೆ ಹೊಂದಿರುವ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗಾಗಿ ಖಾಸಗಿ ಕಂಪನಿಯಿಂದ "ಮಿನಿ ಉದ್ಯೋಗ ಮೇಳ" ವನ್ನು ಹುಕ್ಕೇರಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲಿ ಆಯೋಜಿಸಲಾಗಿದೆ. ಆಸಕ್ತ ಪುರುಷ/ಮಹಿಳಾ ಅಭ್ಯರ್ಥಿಗಳು https://tinyurl.com/mryv6uue ಈ ವೆಬ್ಸೈಟ್ನಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.


ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವು ಉಚಿತವಾಗಿದ್ದು, ಇನ್ನುಳಿದ ಯಾವುದೇ ಸೌಲಭ್ಯಗಳು ಇರುವುದಿಲ್ಲ. ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಳಿಗಾಗಿ ಮೊಬೈಲ್ ಸಂಖ್ಯೆ: 7975856566, ಗೆ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೋವಾ: ವಾಹನ ಕಳ್ಳತನ ಪ್ರಕರಣ ಸಂಬಂಧ ರಾಷ್ಟ್ರೀಯ ಮಟ್ಟದ ಸ್ನೂಕರ್ ಆಟಗಾರನ ಬಂಧನ

ಪಣಜಿ: ಕಳ್ಳತನ ಸೇರಿದಂತೆ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಮಟ್ಟದ ಸ್ನೂಕರ್ ಆಟಗಾರ ಸೇರಿದಂತೆ ಇಬ್ಬರನ್ನು ಗೋವಾ ಪೊಲೀಸರು ಬಂಧಿಸಿದ್ದಾರೆ. ಈ ಇಬ್ಬರು ಆರೋಪಿಗಳು ಕಳ್ಳತನ ಮತ್ತು ದ್ವಿಚಕ್ರ ವಾಹನ ಕಳ್ಳತನದಲ್ಲಿ ಭಾಗಿಯಾಗಿರುವುದು ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ರಾಷ್ಟ್ರ ಮಟ್ಟದ ಸ್ನೂಕರ್ ಆಟಗಾರನ ಬಂಧನ**

ಮಾಹಿತಿ ಪ್ರಕಾರ, ಸ್ನೂಕರ್ ಆಟಗಾರ ಇತ್ತೀಚೆಗೆ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು. ಸ್ನೂಕರ್ ಆಟಗಾರ ಸುಲೇಮಾನ್ ಶೇಖ್ ಮತ್ತು ಅವರ ಪಾಲುದಾರ ಶಬ್ಬೀರ್ಸಾಹೇಬ್ ಶಲವಾದಿ ಅವರನ್ನು ಅವರ ಮನೆಯಿಂದ ಬಂಧಿಸಲಾಗಿದೆ. ಮನೆಗಳಿಗೆ ನುಗ್ಗಿ ವಾಹನಗಳನ್ನು ಕಳ್ಳತನ ಮಾಡುತ್ತಿದ್ದ ಆರೋಪ ಇವರ



ಮೇಲಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಉತ್ತರ ಗೋವಾ) ನಿಧಿನ್ ವಲ್ಸನ್ ತಿಳಿಸಿದ್ದಾರೆ.

**ಗೋವಾವನ್ನು ಪ್ರತಿನಿಧಿಸಿದ್ದ ಸುಲೇಮಾನ್ ಶೇಖ್**

2023ರ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಸುಲೇಮಾನ್ ಶೇಖ್ ಗೋವಾವನ್ನು ಪ್ರತಿನಿಧಿಸಿದ್ದರು ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಅವರಿಬ್ಬರೂ ಕ್ಯಾಸಿನೋ ವ್ಯಸನಿಗಳಾಗಿದ್ದು, ಈ ಕಾರಣದಿಂದಾಗಿ ಅವರು ಅಪರಾಧವನ್ನು ಆರಿಸಿಕೊಂಡರು ಎಂದು ಅವರು ಹೇಳಿದರು.

ಮಾಹಿತಿ ಪ್ರಕಾರ ಆರೋಪಿಗಳ ವಿರುದ್ಧ ಹಲವು ಪ್ರಕರಣಗಳು ದಾಖಲಾಗಿವೆ. ಆರೋಪಿಗಳ ವಿರುದ್ಧ ಉತ್ತರ ಗೋವಾದ ಪೊರ್ವೊರಿಮ್ನಲ್ಲಿ ಎರಡು, ಮಾಪುಸಾ ಮತ್ತು ಮರ್ಡೋಲ್ನಲ್ಲಿ ತಲಾ ಒಂದು ಮತ್ತು ದಕ್ಷಿಣ ಗೋವಾದ ಮರ್ಗೋವಾದಲ್ಲಿ ಮೋಟಾರ್ಸೈಕಲ್ ಕಳ್ಳತನ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಆರೋಪಿಯಿಂದ ಚಿನ್ನ ವಶ**

ಆರೋಪಿಗಳಿಂದ 17 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯನ್ನು ಹಿಡಿಯಲು ಕನಿಷ್ಠ 50 ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ನಂತರ ಆರೋಪಿಗಳನ್ನು ಪತ್ತೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ರಾಜಸ್ಥಾನ ಬಿಜೆಪಿ ನಾಯಕ ಅಮೀನ್ ಪಠಾಣ್ ಕಾಂಗ್ರೆಸ್ ಸೇರ್ಪಡೆ



ಜೈಪುರ: ಭಾರತೀಯ ಜನತಾ ಪಕ್ಷದ ನಾಯಕ ಮತ್ತು ರಾಜಸ್ಥಾನ ಕ್ರಿಕೆಟ್ ಸಂಸ್ಥೆಯ ಮಾಜಿ ಉಪಾಧ್ಯಕ್ಷ ಅಮೀನ್ ಪಠಾಣ್ ಅವರು ಬುಧವಾರ ಕೇಸರಿ ಪಕ್ಷ ತೊರೆದು ಕಾಂಗ್ರೆಸ್ ಸೇರಿದರು.

ಜೈಪುರದಲ್ಲಿ ರಾಜಸ್ಥಾನ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಮತ್ತು ಪಕ್ಷದ ಇತರ ಹಿರಿಯ ನಾಯಕರ ಸಮ್ಮುಖದಲ್ಲಿ ಅಮೀನ್ ಪಠಾಣ್ ಅವರು ಸೇರ್ಪಡೆಯಾದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಪಠಾಣ್, ದೇಶವನ್ನು ಒಗ್ಗೂಡಿಸಲು ಅಟಲ್ ಬಿಹಾರಿ ವಾಜಪೇಯಿ, ಭೈರೋನ್ ಸಿಂಗ್ ಶೇಖಾವತ್ ಮತ್ತು ಇತರ ನಾಯಕರ ನೀತಿಗಳಿಂದ ಸ್ಫೂರ್ತಿಗೊಂಡು 25 ವರ್ಷಗಳ ಕಾಲ ಬಿಜೆಪಿಯಲ್ಲಿದ್ದೆ. ಆದರೆ ಇಂದಿನ ಬಿಜೆಪಿಯಲ್ಲಿ ಗುಜರಾತ್ನ ಜನರಿಗೆ ಮತ್ತು ಕೈಗಾರಿಕೋದ್ಯಮಿಗಳಿಗೆ ಮಾತ್ರ ಬಡ್ತಿ ನೀಡಲಾಗುತ್ತಿದೆ ಎಂದು ಆರೋಪಿಸಿದರು.

"ಅವರು (ಬಿಜೆಪಿ) 'ಸಬ್ಕಾ ಸಾಥ್, ಸಬ್ಕಾ ವಿಕಾಸ್' ಎಂಬ ಘೋಷಣೆಯನ್ನು ನೀಡಿದರು. ಆದರೆ ವಾಸ್ತವವೆಂದರೆ ಚುನಾವಣೆಯಲ್ಲಿ ಒಬ್ಬ ಮುಸಲ್ಮಾನರಿಗೂ ಟಿಕೆಟ್ ನೀಡುವುದಿಲ್ಲ. ಸಮಾಜದ ಒಂದು ವರ್ಗವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗುತ್ತಿದೆ. ಇಂತಹ ಸಂಗತಿಗಳಿಂದ ನಾನು ನೊಂದಿದ್ದೇನೆ. ಹೀಗಾಗಿ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದೇನೆ ಎಂದು ಪಠಾಣ್ ಹೇಳಿದ್ದಾರೆ.

ಈ ಸಂದರ್ಭದಲ್ಲಿ ರಾಜಸ್ಥಾನದ ಕಾಂಗ್ರೆಸ್ ಉಸ್ತುವಾರಿ ಸುಖ್ಜಿಂದರ್ ಸಿಂಗ್ ರಾಂಧವಾ ಕೂಡ ಉಪಸ್ಥಿತರಿದ್ದರು.

# ಉತ್ತರಾಖಂಡ ಸುರಂಗ ಕುಸಿತ: 4ನೇ ದಿನಕ್ಕೆ ಕಾಲಿಟ್ಟ ರಕ್ಷಣಾ ಕಾರ್ಯಾಚರಣೆ, ದೆಹಲಿಯಿಂದ ಹೊಸ ಡ್ರಿಲ್ ಮಷಿನ್ ರವಾನೆ



ಡೆಹ್ರಾಡೂನ್: ಉತ್ತರಾಖಂಡದ ಉತ್ತರಕಾಶಿಯ ಸಿಲ್ಕ್ಯಾರಾದಲ್ಲಿ ನಿರ್ಮಾಣ ಹಂತದ ಸುರಂಗ ಕುಸಿದು ಬಿದ್ದಿದ್ದು, ಸುರಂಗದಲ್ಲಿ 40 ಕಾರ್ಮಿಕರು ಸಿಲುಕಿದ್ದಾರೆ.

ಕಳೆದ ಮೂರು ದಿನಗಳಿಂದ ಉತ್ತರಕಾಶಿ–ಯಮುನೋತ್ರಿ ಹೆದ್ದಾರಿಯಲ್ಲಿ ನಿರ್ಮಾಣ ಹಂತದಲ್ಲಿರುವ 4.5 ಕಿಮೀ ಸಿಲ್ಕ್ಯಾರಾ ಸುರಂಗದಲ್ಲಿ ಸಿಲುಕಿರುವ ಕಾರ್ಮಿಕರನ್ನು ರಕ್ಷಿಸುವ ಪರಿಹಾರ ಕಾರ್ಯಾಚರಣೆ ಬುಧವಾರ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ.

ಕಾರ್ಮಿಕರನ್ನು ಸ್ಥಳಾಂತರಿಸಲು ನಡೆಯುತ್ತಿರುವ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ಹಲವು ಅಡೆತಡೆಗಳು ಉಂಟಾಗುತ್ತಿವೆ. ಭೂಕುಸಿತ ಸಹ ಸಂಭವಿಸಿದ್ದು, ಇದು ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾಡಳಿತದ ಮೂಲಗಳ ಪ್ರಕಾರ, 'ಹಾಳಾದ ಹಳೆಯ ತಂತ್ರಜ್ಞಾನ ಆಗರ್ ಯಂತ್ರದ ಜಾಗದಲ್ಲಿ ಈಗ ದೆಹಲಿಯಿಂದ ಅತ್ಯಾಧುನಿಕ ಡ್ರಿಲ್ ಮಷಿನ್ ತರಲಾಗುತ್ತಿದ್ದು, ವಾಯುಪಡೆಯ ಸಹಾಯದಿಂದ ಅದನ್ನು ಸುರಂಗ ಸ್ಥಳಕ್ಕೆ ಸಾಗಿಸಲಾಗುವುದು' ಎಂದು ಅವರು ಹೇಳಿದ್ದಾರೆ. ಪರಿಹಾರ ಮತ್ತು ರಕ್ಷಣಾ ಕಾರ್ಯದ ಉಸ್ತುವಾರಿ ವಹಿಸಿರುವ ಕರ್ನಲ್ ದೀಪಕ್ ಪಾಟೀಲ್ ಅವರು ಮಾತನಾಡಿ, "ಅಮೆರಿಕ ನಿರ್ಮಿತ ಹೊಸ ಯಂತ್ರ ಬಳಸಲು ಆದೇಶಿಸಲಾಗುತ್ತಿದೆ. ಅದು ವೇಗವಾಗಿ ಕೆಲಸ ಮಾಡುತ್ತದೆ" ಎಂದು ತಿಳಿಸಿದ್ದಾರೆ. ಸುರಂಗದ ಒಳಗೆ ಸಿಲುಕಿರುವ ಕಾರ್ಮಿಕರ ಸ್ಥಿತಿ ಈಗ ಹದಗೆಡಲು ಪ್ರಾರಂಭಿಸಿದೆ. ಅವರಿಗೆ ಜ್ವರ, ಮೈಕೈ ನೋವು ಮತ್ತು ನರಗಳ ಸಮಸ್ಯೆಯಾಗುತ್ತಿರುವ ಬಗ್ಗೆ ತಿಳಿಸಿದ ನಂತರ, ಅಧಿಕಾರಿಗಳು ತಕ್ಷಣವೇ ಪೈಪ್ಗಳ ಮೂಲಕ ಔಷಧಿಗಳನ್ನು ಕಳುಹಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಸಹಕಾರಿ ಕ್ಷೇತ್ರ ಜನಾಂದೋಲನವಾಗಿ ರೂಪುಗೊಳ್ಳಬೇಕು: ಕೆ.ಎನ್.ರಾಜಣ್ಣ

ಶಿವಮೊಗ್ಗ: ದೇಶದಲ್ಲಿ ನವರತ್ನ ಕಾರ್ಖಾನೆಗಳನ್ನು ಆರಂಭಿಸಿದ ಕೀರ್ತಿಗೆ ಬಾಜನರಾದ ಪ್ರಪ್ರಥಮ ಪ್ರಧಾನಮಂತ್ರಿ ಜವಹರಲಾಲ್ ನೆಹರೂರವರು ಈ ನಾಡಿಗೆ ನೀಡಿದ ಕೊಡುಗೆ ಅಪಾರವಾದುದು. ಅವರು ನೀಡಿದ ಮಾರ್ಗದರ್ಶನ ಮತ್ತು ಅವರ ಜೀವನಾದರ್ಶಗಳು ಇಂದಿನ ಜನಾಂಗಕ್ಕೆ ಪರಿಚಯಿಸುವ ಅಗತ್ಯವಿದೆ ಎಂದು ರಾಜ್ಯ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಹೇಳಿದರು.

ಅವರು ನಿನ್ನೆ ನಗರದ ಕುವೆಂಪು ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾದ 70ನೇ ಅಖಿಲ ಭಾರತ ಸಹಕಾರ ಸಪ್ತಾಹ-2023ರ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಸಹಕಾರಿ ಕ್ಷೇತ್ರದ ಕ್ರಾಂತಿಗೆ ಮುನ್ನುಡಿ ಬರೆದ, ವಿಶ್ವಕ್ಕೆ ವಿಶ್ವಮಾನವ ಸಂದೇಶ ಸಾರಿದ ಹಿರಿಯ ಮಾನವತಾವಾದಿಗಳ ಪುಣ್ಯಭೂಮಿ ಶಿವಮೊಗ್ಗ ಎಂದ ಅವರು, ಸಹಕಾರಿ ಕ್ಷೇತ್ರವನ್ನು ರಾಷ್ಟ್ರಕ್ಕೆ ಪರಿಚಯಿಸಿದ ಬಿ.ಎಸ್.ವಿಶ್ವನಾಥನ್‌ರವರು ಶಿವಮೊಗ್ಗ ಜಿಲ್ಲೆಯವರು ಎಂಬುದೇ ಹೆಮ್ಮೆಯ ಸಂಗತಿಯಾಗಿದೆ ಎಂದರು. ಸಹಕಾರಿ ಕ್ಷೇತ್ರ ಸೀಮಿತಗೊಳ್ಳದೇ ಅದು ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಂಡು ಜನಾಂದೋಲನವಾಗಿ ರೂಪುಗೊಳ್ಳಬೇಕು. ರಾಜ್ಯದ ಪ್ರತಿಯೊಬ್ಬರೂ ಸಹಕಾರಿ ಸಂಘಗಳ ಸದಸ್ಯತ್ವ ಪಡೆದು, ಸಹಕಾರಿ ವ್ಯವಸ್ಥೆಯ ಪ್ರಯೋಜನ ಪಡೆದುಕೊಳ್ಳಬೇಕು. ಜನಸಾಮಾನ್ಯರು ನೆಮ್ಮದಿಯ ಹಾಗೂ ಸ್ವಾಭಿಮಾನದ ಬದುಕು ನಡೆಸುವಂತಾಗಲು ಸಹಕಾರಿ ಕ್ಷೇತ್ರ ಪೂರಕವಾಗಿದೆ ಎಂದರು.

ಭಾರತವು ಐದು ಟ್ರಿಲಿಯನ್ ಡಾಲರ್ ಆರ್ಥಿಕತೆಯ ಗುರಿ ಸಾಧಿಸಲು ಸಹಕಾರ ಸಂಸ್ಥೆಗಳು ಪೂರಕವಾಗಿರಲಿವೆ. ಅದು ದೇಶದ ಆರ್ಥಿಕ ಗುರಿ ಹೊಂದಲು ಅನುಕೂಲ ವಾತಾವರಣ ನಿರ್ಮಿಸಲಿದೆ ಎಂದ ಅವರು, ಸಹಕಾರಿ ಕ್ಷೇತ್ರಕ್ಕೆ ಎಲ್ಲರಲ್ಲೂ ಕರೆತರುವ ನಿಟ್ಟಿನಲ್ಲಿ ಪರಿಶಿಷ್ಟ ಜಾತಿ/ಜನಾಂಗದ ಪ್ರತಿನಿಧಿಗಳ ಸದಸ್ಯ ಶುಲ್ಕವನ್ನು ಸರ್ಕಾರವೇ ಭರಿಸುತ್ತಿರುವುದು ಹರ್ಷದ ಸಂಗತಿಯಾಗಿದೆ. ಜನರ ಸಂಕಷ್ಟಗಳಿಗೆ ಸಕಾಲಿಕವಾಗಿ ಸ್ಪಂದಿಸುವ ಶಕ್ತಿ ಸಹಕಾರಿಗಳಿಗಿದೆ ಎಂದರು. ಸಹಕಾರಿ ಕ್ಷೇತ್ರದಲ್ಲಿ ಸಾರ್ವಜನಿಕ ಸೇವೆ ವಿಫುಲ ಅವಕಾಶಗಳಿದ್ದು, ಈ ಸೇವೆಯಿಂದ ಉತ್ತಮ ಕೆಲಸ ಮಾಡಿದ ತೃಪ್ತಿ ದೊರೆಯಲಿದೆ. ರಾಜಕೀಯ ಬಿಟ್ಟರೂ ಸಹಕಾರಿ ಕ್ಷೇತ್ರ ಬಿಡಲಾಗದು ಎಂದ ಅವರು, ಪತ್ತಿನ ವ್ಯವಸ್ಥೆ ಜೊತೆಗೆ ಹೈನುಗಾರಿಕೆಗೂ ಸಹಕಾರಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಅವಕಾಶವಿದೆ. ರೈತರು ಕೃಷಿ ಜೊತೆಗೆ ಇತರ ಉಪಕಸುಬುಗಳಲ್ಲಿ ತೊಡಗಿಸಿಕೊಳ್ಳಬೇಕು. ಅದಕ್ಕೆ ಅಗತ್ಯವಿರುವ ನೆರವನ್ನು ಸಹಕಾರಿ ಬ್ಯಾಂಕುಗಳು ನೀಡಲಿವೆ. ಇದರಿಂದಾಗಿ ಜನರ ಆರ್ಥಿಕ ಶಕ್ತಿಯನ್ನು ಹೆಚ್ಚಿಸುವುದರ ಜೊತೆಗೆ ಸಹಕಾರಿ ಸಂಘಗಳಿಗೂ ಬಲ ತುಂಬಲಿದೆ ಎಂದರು.

ಎಲ್ಲ ಕ್ಷೇತ್ರಗಳಂತೆ ಸಹಕಾರಿ ಕ್ಷೇತ್ರವೂ ಕೂಡ ನ್ಯೂನತೆಗಳಿಂದ ಹೊರತಾಗಿಲ್ಲ. ಸಹಕಾರಿ ಹಣ ಸರ್ಕಾರದ್ದಲ್ಲ. ಅದು ಜನರ ಠೇವಣಿಯೇ ಆಗಿರುತ್ತದೆ ಎಂಬ ಸಾಮಾನ್ಯ ಜ್ಞಾನ ಎಲ್ಲರೂ ಹೊಂದಿರಬೇಕು. ಪ್ರಸ್ತುತ ಸಂದರ್ಭದಲ್ಲಿ ಕೇಂದ್ರ ಸರ್ಕಾರವು 50,000ಕೋ.ರೂ.ಗಳನ್ನು ರಾಜ್ಯಕ್ಕೆ ಬಿಡುಗಡೆಗೊಳಿಸಿದ್ದು, ಶೀಘ್ರದಲ್ಲಿ ಈ ಹಣ ಎಲ್ಲಾ ಸಹಕಾರಿ ಬ್ಯಾಂಕುಗಳಿಗೆ ವಿತರಣೆಯಾಗಲಿದೆ ಎಂದರು. ರಾಜ್ಯದ ಎಲ್ಲಾ ಮುಜರಾಯಿ ಶಾಖೆಗಳ ಆರ್ಥಿಕ ವ್ಯವಹಾರ ಸಹಕಾರಿ ಬ್ಯಾಂಕುಗಳಲ್ಲೇ ಆಗುವಂತೆ ಸರ್ಕಾರ ಕ್ರಮಕೈಗೊಳ್ಳಬೇಕು. ಅಲ್ಲದೇ ರಾಜ್ಯದ ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ



ಸಮಿತಿಗಳ ಆರ್ಥಿಕ ವ್ಯವಹಾರವನ್ನು ಸಹಕಾರಿ ಸಂಘಗಳಲ್ಲೇ ನಡೆಸುವಂತೆ ಸರ್ಕಾರ ಈಗಾಗಲೇ ಆದೇಶ ಹೊರಡಿಸಿದೆ ಎಂದ ಅವರು, ಬ್ಯಾಂಕುಗಳ ಶಕ್ತಿಯನ್ನು ಹೆಚ್ಚಿಸುವ ಕ್ರಮವಾಗಿ ಬ್ಯಾಂಕುಗಳಲ್ಲಿ ಠೇವಣಿ ಮೊತ್ತವನ್ನು ದ್ವಿಗುಣಗೊಳಿಸಲು ಉದ್ದೇಶಿಸಲಾಗಿದೆ ಎಂದರು. ರಾಜ್ಯದ ಸಹಕಾರಿ ಬ್ಯಾಂಕುಗಳ ಆರ್ಥಿಕ ಶಕ್ತಿಯನ್ನು ಕುಂದಲು ಬಿಡದೇ ಪುನರುಜ್ಜೀವನಗೊಳಿಸಲು ಅಗತ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡಲಾಗುವುದು. ಸಾಲ ಪಡೆಯಲು ಅರ್ಹರಿರುವ ಎಲ್ಲಾ ರೈತರಿಗೆ ಸಾಲ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಗ್ರಾಮೀಣ ಜನರ ಆರ್ಥಿಕ ಶಕ್ತಿಯನ್ನು ವೃದ್ಧಿಸುವಂತೆ ಮಾಡಲು, ಅವರು ಸ್ವಾಭಿಮಾನದ ನೆಮ್ಮದಿಯ ಬದುಕನ್ನು ನಡೆಸಲು ಅನುಕೂಲಕರ ವಾತಾವರಣ ನಿರ್ಮಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ರಾಜ್ಯ ಪ್ರಾಥಮಿಕ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್.ಬಂಗಾರಪ್ಪ ಅವರು ಮಾತನಾಡಿ, ಸರ್ಕಾರಕ್ಕೆ ಪರ್ಯಾಯವಾಗಿ ಸಹಕಾರಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಇಲ್ಲಿನ ಗ್ರಾಮೀಣ ಕುಶಲಕರ್ಮಿಗಳ ಕುಲಕಸುಬುಗಳಿಗೆ ಉತ್ತೇಜನ ನೀಡಿ, ಅವುಗಳನ್ನು ಉಳಿಸಿ ಬೆಳೆಸಬೇಕಾಗಿದೆ. ವಿಶೇಷವಾಗಿ ಜೇನುಸಾಕಾಣಿಕೆ, ರೇಷ್ಮೇ ಕೃಷಿಗೆ ಉತ್ತೇಜನ ನೀಡಬೇಕಾಗಿದೆ. ಸಹಕಾರಿ ಬ್ಯಾಂಕುಗಳು ಜನಸಾಮಾನ್ಯರಿಗೆ ತಲುಪಲು ಹೆದ್ದಾರಿಯಂತೆ ಕಾರ್ಯನಿರ್ವಹಿಸುತ್ತಿವೆ ಎಂದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಟಿ.ದೇವೇಗೌಡ ಅವರು ಮಾತನಾಡಿ, ಸಹಕಾರಿಗಳು ತಮ್ಮ ಸಾಧನೆಯನ್ನು ಹೇಳಿ, ಸಂಭ್ರಮಿಸಿ ಎಂದು ಸಹಕಾರಿಗಳಿಗೆ ಕಿವಿಮಾತು ಹೇಳಿದರು. ರಾಜ್ಯದ ಆರ್ಥಿಕ, ಸಾಮಾಜಿಕ ಹಾಗೂ ಮತ್ತಿತರ ಕ್ಷೇತ್ರಗಳ ಬೆಳವಣಿಗೆಗೆ ಸಹಕಾರ ಕ್ಷೇತ್ರ ಪ್ರಮುಖವಾಗಿದೆ. ಸಹಕಾರ ಸಂಘಗಳ ನಿರ್ದೇಶಕರು ತಮ್ಮ ಜವಾಬ್ದಾರಿಯರಿತು ಕಾರ್ಯನಿರ್ವಹಿಸಬೇಕು. ಸಹಕಾರ ಸಂಸ್ಥೆಗಳ ಸ್ವಾಯತ್ತ ಸಂಸ್ಥೆಗಳಾಗಿ ಬೆಳೆಯಬೇಕೆಂದವರು ನುಡಿದರು.

ಶಾಸಕ ಚನ್ನಬಸಪ್ಪ ಅಧ್ಯಕ್ಷತೆ ವಹಿಸಿದ್ದರು. ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್, ಶಾಸಕ ಸಂಗಮೇಶ್ವರ ಬಿ.ಕೆ. ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎನ್.ಮಂಜುನಾಥ ಪ್ರಸಾದ್, ಸಹಕಾರ ಸಂಘಗಳ ನಿಬಂಧಕರು ಕ್ಯಾ.ಡಾ॥ ಕೆ.ರಾಜೇಂದ್ರ, ಜಿಲ್ಲಾಧಿಕಾರಿ ಡಾ॥ ಆರ್.ಸೆಲ್ವಮಣಿ, ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸ್ನೇಹಲ್ ಸುಧಾಕರ್ ಲೋಖಂಡೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ.ಕೆ.ಮಿಥುನ್‌ಕುಮಾರ್, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಅಧ್ಯಕ್ಷ ಡಾ॥ ಆರ್.ಎಂ.ಮಂಜುನಾಥಗೌಡ ಅವರು ಉಪಸ್ಥಿತರಿದ್ದರು.

## ಸಹಾರಾ ಸಮೂಹ'ದ ಸಂಸ್ಥಾಪಕ 'ಸುಬ್ರತಾ ರಾಯ್' ವಿಧಿವಶ



ನವದೆಹಲಿ: ಸಹಾರಾ ಸಮೂಹದ ಸ್ಥಾಪಕ ಸುಬ್ರತಾ ರಾಯ್ ದೀರ್ಘಕಾಲದ ಅನಾರೋಗ್ಯದ ನಂತರ ಮುಂಬೈನಲ್ಲಿ ನಿಧನರಾದರು. ಅವರಿಗೆ 75 ವರ್ಷ ವಯಸ್ಸಾಗಿತ್ತು.

ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ಅವರನ್ನು ಭಾನುವಾರ ಕೋಕಿಲಾಬೆನ್ ಧೀರೂಭಾಯಿ ಅಂಬಾನಿ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಸಂಸ್ಥೆಗೆ (ಕೆಡಿಎಎಚ್) ದಾಖಲಿಸಲಾಗಿತ್ತು. ಆದರೇ ಚಿಕಿತ್ಸೆ ಫಲಿಸದೇ ಅವರು ನಿಧನರಾಗಿರೋದಾಗಿ ತಿಳಿದು ಬಂದಿದೆ.

ಈ ಕುರಿತಂತೆ ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡಿರುವಂತ ಸಹಾರಾ ಇಂಡಿಯಾ ಪರಿವಾರ್, ನಮ್ಮ ಗೌರವಾನ್ವಿತ 'ಸಹರಾಶ್ರೀ' ಸುಬ್ರತಾ ರಾಯ್ ಸಹಾರಾ ಅವರ ನಿಧನದ ಬಗ್ಗೆ ಸಹಾರಾ ಇಂಡಿಯಾ ಪರಿವಾರ್ ತೀವ್ರ ದುಃಖದಿಂದ ತಿಳಿಸುತ್ತಿದೆ.

ಸ್ಪೂರ್ತಿದಾಯಕ ನಾಯಕ ಮತ್ತು ದೂರದೃಷ್ಟಿಯ ಸಹರಾಶ್ರೀ ಜಿ ಅವರು ಮೆಟಾಸ್ಟಾಟಿಕ್ ಕ್ಯಾನ್ಸರ್, ಅಧಿಕ ರಕ್ತದೊತ್ತಡ ಮತ್ತು ಮಧುಮೇಹದಿಂದ ಉಂಟಾಗುವ ತೊಡಕುಗಳೊಂದಿಗೆ ದೀರ್ಘಕಾಲದ ಹೋರಾಟದ ನಂತರ ಹೃದಯ ಸ್ತಂಭನದಿಂದಾಗಿ 2023 ರ ನವೆಂಬರ್ 14 ರಂದು ರಾತ್ರಿ 10.30 ಕ್ಕೆ ನಿಧನರಾದರು ಎಂದು ತಿಳಿಸಿದೆ.

## ಮೆಸ್ಕಾಂ ಗ್ರಾಹಕರ ಸಂವಹನ ಸಭೆ

ಶಿವಮೊಗ್ಗ: ಶಿವಮೊಗ್ಗ ನಗರ ಉಪ ವಿಭಾಗ-2 ವ್ಯಾಪ್ತಿಯಲ್ಲಿ ನ. 18 ರಂದು ಬೆಳಿಗ್ಗೆ : 11:00 ರಿಂದ ಮಧ್ಯಾಹ್ನ 01:00 ರವರೆಗೆ ಎನ್.ಟಿ.ರಸ್ತೆ, ನ್ಯೂಮಂಡ್ಲಿ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, ಮೆಸ್ಕಾಂ ನಗರ ಉಪವಿಭಾಗ-2ರ ಕಚೇರಿಯಲ್ಲಿ ಗ್ರಾಹಕರ ಸಂವಹನ ಸಭೆಯನ್ನು ನಡೆಸಲು ಉದ್ದೇಶಿಸಿರುವುದರಿಂದ ನ.ಉ.ವಿ-2ರ ವ್ಯಾಪ್ತಿಯ ಗ್ರಾಹಕರು ಈ ಸಭೆಗೆ ಹಾಜಾರಾಗಿ ತಮ್ಮ ಅಹವಾಲುಗಳನ್ನು ನೀಡುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ನೀರು ಸರಬರಾಜು ಷೆಡ್ಯೂಲ್‌ನಲ್ಲಿ ವ್ಯತ್ಯಯ

ಬೆಳಗಾವಿ: ಬೆಳಗಾವಿ ನಗರದ ಅಲರವಾಡ ಹತ್ತಿರ 200 ಟಟ ಮತ್ತು ಗುಮ್ಮಟಮಾಳ ಹತ್ತಿರ 160 ಟಟ ಅಳತೆಯ ನೀರಿನ ಮುಖ್ಯ ಕೊಳವೆಯಲ್ಲಿ ಸೋರಿಕೆ ಉಂಟಾಗಿದ್ದು, ನ.14 2023 ರಂದು ತುರ್ತಾಗಿ ದುರಸ್ತಿ ಕಾರ್ಯ ಕೈಗೊಂಡಿರುವುದರಿಂದಾಗಿ ಸದರಿ ಪ್ರದೇಶಗಳ ಕೆಲವು ಭಾಗಗಳಿಗೆ ನೀರು ಸರಬರಾಜು ಮಾಡುವಲ್ಲಿ ವ್ಯತ್ಯಯ ಉಂಟಾಗುವುದು.

ಆದ್ದರಿಂದ ಪ್ರಸ್ತುತ ಇರುವ ನೀರು ಸರಬರಾಜು ಸರದಿಯು (ಷೆಡ್ಯೂಲ್) ಮುಂದಿನ ಎರಡು ದಿನಗಳಿಗೆ ಮುಂದುವರಿಯುತ್ತದೆ. ನ.15 ಮತ್ತು 16 ಎರಡು ದಿನ ಬೆಳಗಾವಿ ನಗರದ ಅಲರವಾಡ ಸಂಪರ್ಕದ ಪ್ರದೇಶಗಳಾದ : ಅಲರವಾಡ ಮತ್ತು ದೇವರಾಜ ಅರಸು ಕಾಲೋನಿ, ಗುಮ್ಮಟಮಾಳ ಸಂಪರ್ಕದ ಪ್ರದೇಶಗಳಾದ : ದತ್ತಗಲ್ಲಿ, ವಡಗಾವ, ಭಾರತ್ ನಗರ ಮತ್ತು ಜುನೆ ಈ ಎರಡು ಪ್ರದೇಶಗಳಲ್ಲಿ ನೀರು ಸರಬರಾಜು ಮಾಡುವ ಷೆಡ್ಯೂಲ್‌ನಲ್ಲಿ ವ್ಯತ್ಯಯ ಉಂಟಾಗುವುದು.

ಆದ್ದರಿಂದ ಇಂತಹ ಅನಿವಾರ್ಯ ಸಮಯದಲ್ಲಿ ಮೇ॥. ಎಲ್ & ಟಿ ಯೊಂದಿಗೆ ಸಾರ್ವಜನಿಕರು ಸಹಕರಿಸಬೇಕು ಎಂದು ಯೋ.ಅ.ಫ, ಕುಸ್ನೆಂಪ್-ಕೆ.ಯು.ಐ.ಡಿ.ಎಫ್.ಸಿ, ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಹಿ.ಆರ್.ಡಬ್ಲ್ಯೂ. ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಜಿಲ್ಲೆಯ ಸವದತ್ತಿ, ಹುಕ್ಕೇರಿ, ರಾಯಬಾಗ ಗೋಕಾಕ ಮತ್ತು ಮೂಡಲಗಿ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ (ವ್ಹಿ. ಆರ್. ಡಬ್ಲ್ಯೂ.) ಹುದ್ದೆಗಳನ್ನು ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಮಾಸಿಕ ರೂ.9000/- ಗಳ ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ.

ಆಯಾ ಗ್ರಾಮ ಪಂಚಾಯಿತಿಗಳ ಹಾಗೂ ಪಟ್ಟಣ ಪಂಚಾಯತಿ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಷರತ್ತಿಗೊಳಪಟ್ಟು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಡಿಸೆಂಬರ್ 13, 2023ರ ಸಂಜೆ 5 ಗಂಟೆಯೊಳಗಾಗಿ ಆಯಾ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ, ಅವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನಎಂ.ಆರ್.ಡಬ್ಲ್ಯೂ ಇವರನ್ನು ಸಂಪರ್ಕಿಸಬಹುದಾಗಿದೆ. ಅರ್ಜಿದಾರರು ವಿಕಲಚೇತನರಿದ್ದು, ಕನಿಷ್ಟ 40%ಅಥವಾ 40% ಕ್ಕಿಂತ ಹೆಚ್ಚಿನ ಅಂಗವಿಕಲತೆ ಪ್ರಮಾಣ ಹೊಂದಿರಬೇಕು. ಅರ್ಜಿದಾರರು ಆಯಾ ಗ್ರಾಮ ಪಂಚಾಯತಿ ವ್ಯಾಪ್ತಿಗೊಳಪಟ್ಟವರಾಗಿರಬೇಕು, ಅರ್ಜಿದಾರರು ಕನಿಷ್ಠ ಎಸ್.ಎಸ್.ಎಲ್.ಸಿ.ಉತ್ತೀರ್ಣ/ಅನುತ್ತೀರ್ಣರಾದ ಮತ್ತು ಕಂಪ್ಯೂಟರ ಜ್ಞಾನ ಹೊಂದಿರಬೇಕು. ಅರ್ಜಿದಾರರು ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ಡಿ.13 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಂಯೋಮಿತಿಯಲ್ಲಿರಬೇಕು.ವಿಕಲಚೇತನ ಮಹಿಳಾ, ಪ.ಜಾತಿ ಮತ್ತು ಪ.ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಸ್ಟೆಲ್ ವಿದ್ಯಾರ್ಥಿಗಳ ಈ ಕಟ್ಟಡದಿಂದ ಆ ಕಟ್ಟಡಕ್ಕೆ ರಾಕೆಟ್ ವಾರ್



ಎಲ್ಲೆಡೆ ದೀಪಾವಳಿ ಹಬ್ಬವನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸುತ್ತಾರೆ. ಆದರೆ ರಜೆಗೆ ತಮ್ಮ ಮನೆಗಳಿಗೆ ಹೋಗದೇ ಹಾಸ್ಟೆಲ್‌ನಲ್ಲಿ ಉಳಿದ ವಿದ್ಯಾರ್ಥಿಗಳು ಆ ಕಟ್ಟಡದಿಂದ ಈ ಕಟ್ಟಡಕ್ಕೆ ಒಂದಾದ ಮೇಲೆ ಒಂದರಂತೆ ರಾಕೆಟ್ ಪಟಾಕಿಯನ್ನು ಹಾರಿಸುತ್ತಿರುವ ವಿಡಿಯೋವೊಂದು ವೈರಲ್ ಆಗಿದೆ.

ಘರ್ ಕಲೇಶ್ ಎಂಬ ಟ್ವಿಟ್ಟರ್ ಪೇಜ್‌ನಿಂದ ಈ ವೀಡಿಯೋ ವೈರಲ್ ಆಗಿದೆ. 7 ಲಕ್ಷಕ್ಕೂ ಅಧಿಕ ಜನರು ವೀಕ್ಷಿಸಿದ್ದಾರೆ. ಆದರೆ ಈ ಘಟನೆ ಎಲ್ಲಿ ನಡೆದಿದೆ ಎಂಬ ಬಗ್ಗೆ ಸ್ಪಷ್ಟತೆ ಇಲ್ಲ.

ವಿಡಿಯೋದಲ್ಲಿ ಹಾಸ್ಟೆಲ್ ವಿದ್ಯಾರ್ಥಿಗಳು ತಾವಿದ್ದ ಕಟ್ಟಡದಿಂದ ಸಮೀಪದ ಕಟ್ಟಡಕ್ಕೆ ಪರಸ್ಪರ ರಾಕೆಟ್ ಪಟಾಕಿಗಳನ್ನು ಹಾರಿಸುತ್ತಿರುವುದನ್ನು ಕಾಣಬಹುದಾಗಿದೆ.

ಇದು ಒಂದು ರೀತಿಯ ಯುದ್ಧದಂತೆ ಭಾಸವಾಗಿದೆ. ಒಬ್ಬರಾದ ಮೇಲೆ ಒಬ್ಬರು ಪರಸ್ಪರ ಆ ಕಟ್ಟಡದಿಂದ ಈ ಕಟ್ಟಡಕ್ಕೆ ಪಟಾಕಿ ಹಾರಿಸುತ್ತಿದ್ದು, ಯುದ್ಧದಲ್ಲಿ ರಾಕೆಟ್ ದಾಳಿಯಂತೆ ಗೋಚರಿಸುತ್ತಿದೆ.

19 ಸೆಕೆಂಡ್‌ಗಳ ಈ ವಿಡಿಯೋ ನೋಡಿದ ಅನೇಕರು ಇಸ್ರೇಲ್ ಹಮಾಸ್ ಯುದ್ಧವನ್ನು ಭಾರತದಲ್ಲಿ ರಿಕ್ರಿಯೇಟ್ ಮಾಡಲಾಗಿದೆ ಎಂದು ಕಮೆಂಟ್ ಮಾಡಿದ್ದಾರೆ. ಈ ವೀಡಿಯೋ ನಮಗೆ ಹಾಸ್ಟೆಲ್ ದಿನಗಳನ್ನು ನೆನಪಿಸಿತು ಎಂದು ಕೆಲವರು ಕಮೆಂಟ್ ಮಾಡಿದರೆ, ಮತ್ತೆ ಕೆಲವರು ಬಹುಶಃ ಹಾಸ್ಟೆಲ್‌ನಲ್ಲಿ ವಾರ್ಡನ್ ಇರಲಿಲ್ಲ ಎನಿಸುತ್ತಿದೆ ಎಂದು ಕಮೆಂಟ್ ಮಾಡಿದ್ದಾರೆ.

## ಸಿಲಿಂಡರ್ ಸ್ಫೋಟ: ಮೂವರು ಗಂಭೀರ ಗಾಯ

ಚಿಕ್ಕಬಳ್ಳಾಪುರ: ಗ್ಯಾಸ್ ಸಿಲಿಂಡರ್ ಸೋರಿಕೆಯಾಗಿ ಏಕಾಏಕಿಯಾಗಿ ಬೆಂಕಿ ಹೊತ್ತಿಕೊಂಡ ಪರಿಣಾಮ ಮೂವರು ಗಂಭೀರವಾಗಿ ಗಾಯಗೊಂಡ ಘಟನೆ ಮುನ್ಸಿಪಾಲ್ ಕಾಲೇಜಿನ ಮುಂಭಾಗದ ಫರ್ಜಾನಾ ಎಂಬವರ ಮನೆಯಲ್ಲಿ ಈ ಘಟನೆ ನಡೆದಿದೆ.

ಮನೆ ಮಾಲೀಕರಾದ ಫರ್ಜಾನಾ ಕೆಲಸಕ್ಕೆ ತೆರಳಿದ್ದ ವೇಳೆ ಅವರ ಮಗ ರಫೀಕ್ (4) ಹಾಗೂ ಮಗಳು ಹರ್ಷಿಯಾ ಭಾನು (16) ಮನೆಯಲ್ಲಿದ್ದರು.

ಈ ವೇಳೆ ಮನೆಯಿಂದ ಗ್ಯಾಸ್ ವಾಸನೆ ಬರುತ್ತಿದೆ ಎಂದು ಪಕ್ಕದ ಮನೆಯ ಹೇಮಾವತಿ (18) ಎಂಬಾಕೆ ಬಂದಿದ್ದಾಳೆ. ಈ ವೇಳೆ ತಕ್ಷಣ ಬೆಂಕಿ ಹೊತ್ತಿಕೊಂಡಿದ್ದು ಸ್ಫೋಟ ಸಂಭವಿಸಿದೆ.

ಘಟನೆಯಲ್ಲಿ ಮೂವರು ಸಹ ಗಂಭೀರವಾಗಿ ಗಾಯಗೊಂಡಿದ್ದಾರೆ. ಮೂವರಿಗೂ 35 ರಿಂದ 40% ಸುಟ್ಟ ಗಾಯಗಳಾಗಿದ್ದು ಅವರಿಗೆ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ. ಬಳಿಕ ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ.



ಘಟನೆಯಲ್ಲಿ ಮನೆಯಲ್ಲಿದ್ದ ಪಾತ್ರೆ ಹಾಗೂ ಸಾಮಾನುಗಳು ಎಲ್ಲವೂ ಚೆಲ್ಲಾಪಿಲ್ಲಿಯಾಗಿವೆ. ಮನೆಯ ಮೇಲಿನ ತಗಡಿನ ಶೀಟ್ಗಳು ಹಾರಿ ಹೋಗಿವೆ. ಹಿಂಬದಿಯ ಮನೆಯ ಎರಡು ಬೈಕ್ಗಳು ಹಾನಿಗೊಳಗಾಗಿವೆ. ಈ ಸಂಬಂಧ ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಘಟನಾ ಸ್ಥಳಕ್ಕೆ ಪಿಎಸ್ಐ ನಂಜುಂಡಯ್ಯ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಪ್ರತ್ಯೇಕ ಅಭಿವೃದ್ಧಿ ನಿಗಮ ನೀಡದಿದ್ದರೆ ಉಗ್ರ ಹೋರಾಟ: ಜಗದೀಶ ಬೆಟಗೇರಿ

ಬೆಳಗಾವಿ: ರಾಜ್ಯದಲ್ಲಿ 20 ಲಕ್ಷಕ್ಕೂ ಹೆಚ್ಚು ಇರುವ ಸಮಗಾರ ಹರಳಯ್ಯ ಸಮಾಜಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮ ನೀಡುವಂತೆ ಈಗಾಗಲೇ ಮನವಿ ಸಲ್ಲಿಸಲಾಗಿದೆ, ನೀಡದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ಸಮಗಾರ ( ಚಮ್ಮಾರ )ಹರಳಯ್ಯ ಸಂಘದ ರಾಜ್ಯಾಧ್ಯಕ್ಷರಾದ ಜಗದೀಶ ಬೆಟಗೇರಿ ಇಂದಿಲ್ಲಿ ಹೇಳಿದರು.

ಕರ್ನಾಟಕ ರಾಜ್ಯ ಸಮಗಾರ (ಚಮ್ಮಾರ) ಹರಳಯ್ಯ ಸಂಘ (ರಿ) ನಾಗರಭಾವಿ ಬೆಂಗಳೂರು ಈ ಸಂಘದವರು ಇತ್ತೀಚೆಗೆ ನಗರದ ಮಾರುತಿ ದೇವಸ್ಥಾನ, ನಾಥ ಪೈ ಚೌಕ, ಶಹಾಪುರದಲ್ಲಿ ಸಂಘದ ನೋಂದಣಿಗೆ ಚಾಲನೆ ನೀಡಿದ ಬೆಟಗೇರಿಯವರು ಮೇಲಿನಂತೆ ಅಭಿಪ್ರಾಯ ಪಟ್ಟರು.

ಬೆಳಗಾವಿ ನಗರ ಮಹಾಮಂಡಳದ ಅಧ್ಯಕ್ಷರಾದ ರವಿ ಶಿಂದೆ ಯವರು ನೋಂದಣಿ ಫಾರ್ಮ್ ನೀಡಿ ಮಾತನಾಡುತ್ತ ಸಮಗಾರ ಹರಳಯ್ಯ ಸಮಾಜದ ಸರ್ವೋತೋಮುಖ ಅಭಿವ್ರದ್ಧಿಗಾಗಿ ಶ್ರಮಿಸುವುದಾಗಿ ಹೇಳಿದರು.



ಉಪಾಧ್ಯಕ್ಷರುಗಳಾದ ಪರುಶರಾಮ ಅರಿಕೇರಿ, ಬಿ.ಆರ್ ಕಟ್ಟಿಮನಿ, ಮತ್ತು ಯಲ್ಲಪ್ಪಾ ಬೇಂಡಿಗೇರಿ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ ಮದನಭಾವಿ, ಹಾಗೂ ಪ್ರೇಮಾ ಭಂಡಾರಿ ಯಲ್ಲಪ್ಪಾ ಸನಕ್ಯಾನವರವರು ಮಾತನಾಡಿ ಸಮಾಜದ ಮುಂದಿನ ನಡೆಗಳನ್ನು ವಿವರಿಸಿದರು

ಈ ಸಂದರ್ಭದಲ್ಲಿ ಸರೋಜಾ ಸಂಪಗಾವ, ಚಂದ್ರಕಾಂತ ಚವಾನ, ಶಶಿಕಾಂತ ನಿಪ್ಪಾನಿಕರ, ಶಿವರಾಜ್ ಸೌದಾಗರ, ಹನುಮಂತ ಜಾದವ, ಸಂತೋಷ ಹೊಂಗಲ, ಸಮಾಜದ ಗುರುಹಿರಿಯರು ಹಾಗೂ ಯುವಧುರೀಣರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಕಿಶೋರ ಪವಾರ ನಿರೂಪಿಸಿದರು ಕೊನೆಯಲ್ಲಿ ಶ್ರೀಪಾದ ಬೆಟಗೇರಿ ಯವರು ವಂದಿಸಿದರು.

## ವಿದ್ಯುತ್ ಕಳವು ಆರೋಪ: ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ಎಫ್‌ಐಆರ್ ದಾಖಲು

ಬೆಂಗಳೂರು: ವಿದ್ಯುತ್ ಕಳ್ಳತನದ ಆರೋಪದ ಮೇಲೆ ಮಾಜಿ ಮುಖ್ಯಮಂತ್ರಿ, ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್‌ಡಿ ಕುಮಾರಸ್ವಾಮಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಬೆಸ್ಕಾಂ ಅಧಿಕಾರಿಗಳು ನೀಡಿದ ದೂರಿನ ಅನ್ವಯ ಕುಮಾರಸ್ವಾಮಿ ಅವರ ವಿರುದ್ಧ ಜಯನಗರ ಜಾಗೃತದಳದ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಮಂಗಳವಾರ (ನ.14) ರಂದು ಅಪರಾಧ ಎಸಗಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಎಇಇ ಪ್ರಶಾಂತ್ ಕುಮಾರ್ ಎಂಬುವವರು ದೂರು ನೀಡಿದ್ದಾರೆ. ಈ ದೂರಿನನ್ವಯ ಎಫ್‌ಐಆರ್ ದಾಖಲು ಮಾಡಿಕೊಳ್ಳಲಾಗಿದೆ ಎಂದು ತಿಳಿದುಬಂದಿದೆ.

ಎಚ್.ಡಿ ಕುಮಾರಸ್ವಾಮಿಯವರು ಬೆಂಗಳೂರಿನ ಜೆಪಿ ನಗರದ ತಮ್ಮ ನಿವಾಸದಲ್ಲಿ ದೀಪಾವಳಿಯ



ದೀಪಾಲಂಕಾರಕ್ಕೆ ನೇರವಾಗಿ ವಿದ್ಯುತ್ ಕಂಬದಿಂದ ಅಕ್ರಮ ವಿದ್ಯುತ್ ಸಂಪರ್ಕ ಪಡೆದಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಈ ಕುರಿತು ವಿಡಿಯೋ, ಫೋಟೋ ಸಮೇತ ಕಾಂಗ್ರೆಸ್ ಟ್ವೀಟ್ ಮಾಡಿತ್ತು.

ಇದಕ್ಕೂ ಮೊದಲು ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರ ಮನೆಗೆ ಬೆಸ್ಕಾಂ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು.

ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದ ಬೆಸ್ಕಾಂ ಕಾರ್ಯನಿರ್ವಾಹಕ ಎಂಜಿನಿಯರ್ ಸುಧಾಕರ್ ಅವರು, ಮನೆ ದೀಪಾಲಂಕಾರಕ್ಕೆ ಅಕ್ರಮವಾಗಿ ವಿದ್ಯುತ್ ಸಂಪರ್ಕವನ್ನು ಪಡೆಯಲಾಗಿತ್ತು. ಅದನ್ನು ಪರಿಶೀಲನೆ ಮಾಡಲಾಗಿದೆ.

ಸ್ಥಳದಲ್ಲಿ ಏನಿದೆ ಎಲ್ಲವನ್ನೂ ಪರಿಶೀಲನೆ ಮಾಡಿದ್ದೇವೆ. ಹೆಚ್ಚುವರಿ ತನಿಖೆ ಸಹ ನಾವು ಮಾಡಬೇಕಿದೆ. ಇದು ದಂಡ ವಿಧಿಸಬಹುದಾದ ಶಿಕ್ಷೆ ಮಾತ್ರ. ನಮ್ಮ ಮೇಲಧಿಕಾರಿಗಳಿಗೆ ಎಲ್ಲ ಮಾಹಿತಿಯನ್ನು ನೀಡುತ್ತೇವೆ. ಲೈಟಿಂಗ್ಸ್‌ಗೆ ನೇರವಾಗಿ ವಿದ್ಯುತ್ ಕಂಬದಿಂದ ಸಂಪರ್ಕ ನೀಡಲಾಗಿದೆ. ಕುಮಾರಸ್ವಾಮಿ ಅವರು ತಪ್ಪು ಆಗಿರುವುದನ್ನು ಒಪ್ಪಿಕೊಂಡಿದ್ದಾರೆ. ನಾವು ಈಗ ಪರಿಶೀಲನೆ ಮಾಡುವ ವೇಳೆ ಎಲ್ಲ ರೀತಿಯ ಸಹಕಾರ ನೀಡಿದ್ದಾರೆ ಎಂದು ಹೇಳಿದ್ದಾರೆ.

## ಶಿರಸಿಯಲ್ಲಿ ಆಟೋಗೆ ಕಾರು ಡಿಕ್ಕಿ; ವೃದ್ಧೆ ಸಾವು, ನಾಲ್ವರು ಗಂಭೀರ

ಶಿರಸಿ: ತಾಲೂಕಿನ ಯಡಳ್ಳಿಯಲ್ಲಿ ಒಂದೇ ಕುಟುಂಬದ ಏಳು ಮಂದಿ ಪ್ರಯಾಣಿಸುತ್ತಿದ್ದ ಆಟೋಗೆ ಕಾರು ಡಿಕ್ಕಿಯಾಗಿ ವೃದ್ಧೆ ಸಾವನ್ನಪ್ಪಿದ ಘಟನೆ ನಡೆದಿದೆ.

ಈ ಅಪಘಾತದಲ್ಲಿ ವೃದ್ಧೆ ಸಾವನ್ನಪ್ಪಿದ್ದು, ನಾಲ್ವರಿಗೆ ಗಂಭೀರ ಗಾಯಗಳಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಹುಬ್ಬಳ್ಳಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಜೋಗದ ಹೊಳೆ ಪದ್ಮಾವತಿ ದೇವಸ್ಥಾನಕ್ಕೆ ಭೇಟಿ ನೀಡಿದ ಒಂದೇ ಕುಟುಂಬದ ಏಳು ಮಂದಿ ಶಿರಸಿಗೆ ವಾಪಸ್ ಆಗುತ್ತಿದ್ದ ಆಟೋಗೆ ಯಡಳ್ಳಿಯಲ್ಲಿ ಕಾರು ಡಿಕ್ಕಿ ಹೊಡೆದಿದೆ. ಕಾರು ಶಿವಮೊಗ್ಗದಿಂದ ಶಿರಸಿಗೆ ಆಗಮಿಸಿ ಮತ್ತೆ ಶಿವಮೊಗ್ಗದತ್ತ ತೆರಳುತ್ತಿತ್ತು ಎನ್ನಲಾಗಿದೆ.

ವೃದ್ಧೆ ವಿಶಾಲಾಕ್ಷಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು, ಉಳಿದ



ನಾಲ್ವರು ಗಾಯಾಳುಗಳಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಹುಬ್ಬಳ್ಳಿ ಕಿಮ್ಸ್ಗೆ ದಾಖಲಿಸಲಾಗಿದೆ.

## ಜಿಲ್ಲಾ ಮಟ್ಟದ ಯುವಜನೋತ್ಸವ

ಬೆಳಗಾವಿ: ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ 2023-24ನೇ ಸಾಲಿನ ಜಿಲ್ಲಾ ಮಟ್ಟದ ಯುವ ಜನೋತ್ಸವ ಆಯ್ಕೆಯನ್ನು ನವ್ಹೆಂಬರ್ 18, 2023 ರಂದು ಬೆಳಗಾವಿಯ ಕೊಲ್ಹಾಪೂರ ಸರ್ಕಲ್ ಹತ್ತಿರದ ಒಳಾಂಗಣ ಕ್ರೀಡಾಂಗಣದಲ್ಲಿ (ಮಾಹೇಶ್ವರಿ ಅಂಧಮಕ್ಕಳ ಶಾಲೆಯ ಮುಂಭಾಗ) ಹಮ್ಮಿಕೊಳ್ಳಲಾಗಿದೆ.

ಸದರಿ ಯುವಜನೋತ್ಸವದಲ್ಲಿ 15 ರಿಂದ 29 ವರ್ಷದೊಳಗಿನ ಯುವಕ/ ಯುವತಿಯರಿಗಾಗಿ ಜಾನಪದ ನೃತ್ಯ, ಜಾನಪದಗೀತೆ, ಜನಪದ ನೃತ್ಯ(ವೈಯಕ್ತಿಕ), ಜನಪದಗೀತೆ(ವೈಯಕ್ತಿಕ), ಕಥೆ ಬರೆಯುವುದು, ಪೋಸ್ಟರ್ ಮೇಕಿಂಗ್, (ವೈಯಕ್ತಿಕ), **Declamation** (ಘೋಷಣೆ), ಛಾಯಾಚಿತ್ರಣ (ವೈಯಕ್ತಿಕ) ಸ್ಪರ್ಧೆಗಳನ್ನು ನಡೆಸಲಾಗುವುದು.

ಬೆಳಗಾವಿ ಜಿಲ್ಲೆಯ 15 ರಿಂದ 29 ವರ್ಷದೊಳಗಿನ ಕಾಲೇಜು ವಿದ್ಯಾರ್ಥಿಗಳು ಹಾಗೂ ಯುವಕ/ ಯುವತಿಯರು ಈ ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿರುತ್ತದೆ.

ಭಾಗವಹಿಸುವ ಸ್ಪರ್ಧಾಳುಗಳು ವಯಸ್ಸಿನ ದೃಢೀಕರಣಕ್ಕಾಗಿ ಆಧಾರ ಗುರುತಿನ ಚೀಟಿ ಅಥವಾ ಶಾಲಾ ದಾಖಲಾತಿ ಹಾಗೂ ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಪ್ರತಿಯೊಂದಿಗೆ ನೇರವಾಗಿ ನ. 18 2023 ರಂದು ಬೆಳಿಗ್ಗೆ 9 ಗಂಟೆ ಒಳಗಾಗಿ ಬೆಳಗಾವಿಯ ಕೊಲ್ಹಾಪೂರ ಸರ್ಕಲ್ ಹತ್ತಿರದ ಒಳಾಂಗಣ ಕ್ರೀಡಾಂಗಣದಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಭಾಗವಹಿಸುವ ಸ್ಪರ್ಧಾಳುಗಳಿಗೆ ಉಚಿತ ಪ್ರವೇಶವಿದ್ದು, ಬೆಳಗಾವಿ ಹೊರತುಪಡಿಸಿ ಇತರೆ ತಾಲೂಕುಗಳಿಂದ ಬರುವಂತಹ ಸ್ಪಧಾಳುಗಳಿಗೆ ಪ್ರಯಾಣ ಭತ್ಯೆಯನ್ನು ನೀಡಲಾಗುವುದು ಹಾಗೂ ಭಾಗವಹಿಸುವಂತಹ ಎಲ್ಲ ಸ್ಪರ್ಧಾಳುಗಳಿಗೆ ಲಘು ಉಪಾಹಾರದ ವ್ಯವಸ್ಥೆ ಮಾಡಲಾಗಿರುತ್ತದೆ.. ವಿಜೇತ ಸ್ಪರ್ಧಾಳುಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ನೀಡಲಾಗುವುದು.

ಹೆಚ್ಚಿನ ವಿವರಗಳಿಗಾಗಿ ಬಸವರಾಜ ಜಕ್ಕನ್ನವರ ಇವರ ದೂರವಾಣಿ ಸಂಖ್ಯೆ. 7411144485 ಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರ ಮತ್ತು ಅಂತರರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಬಹುಮಾನ

ಬೆಳಗಾವಿ: 2021 ಮತ್ತು 2022 ನೇ ಸಾಲಿನಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಪದಕ ಪಡೆದ ಕರ್ನಾಟಕದ ಕ್ರೀಡಾಪಟುಗಳು ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾರತವನ್ನು ಪ್ರತಿನಿಧಿಸಿ ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿ ರಾಷ್ಟ್ರಕ್ಕೆ ಕೀರ್ತಿ ತಂದ ಕರ್ನಾಟಕದ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದ ವತಿಯಿಂದ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

ಕರ್ನಾಟಕವನ್ನು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಅಧಿಕೃತವಾಗಿ ಪ್ರತಿನಿಧಿಸಿ ಪದಕ ಪಡೆದ ಹಾಗೂ ಭಾರತವನ್ನು ಅಧಿಕೃತವಾಗಿ ಅಂತರರಾಷ್ಟ್ರ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿದ ಕರ್ನಾಟಕದ ಕ್ರೀಡಾಪಟುಗಳು ನಿಗದಿತ ನಮೂನೆಯಲಿ ಅರ್ಜಿಯನ್ನು ಭರ್ತಿ ಮಾಡಿ, ಅಂಗೀಕೃತ ಕ್ರೀಡಾ ಸಂಸ್ಥೆಗಳಿಂದ/ಜಿಲ್ಲೆಗಳ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,/ಕರ್ನಾಟಕ ಕ್ರೀಡಾ ಪ್ರಾಧೀಕಾರದ ಶಿಫಾರಸ್ಸಿನೊಂದಿಗೆ ಸಲ್ಲಿಸಬೇಕಾಗಿರುತ್ತದೆ. ಆದ್ದರಿಂದ ಅರ್ಹ ಕ್ರೀಡಾಪಟುಗಳು ಅರ್ಜಿಗಳನ್ನು ಉಪ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಳಗಾವಿ ಇಲ್ಲಿ ನವ್ಹೆಂಬರ್ 22, 2023 ರೊಳಗಾಗಿ ಅರ್ಜಿ ಸಲ್ಲಿಸಬಹುದು. ನಂತರ ಬಂದ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗುವುದಿಲ್ಲ.ಹೆಚ್ಚಿನ ವಿವರಗಳಿಗಾಗಿ ಉಪ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಳಗಾವಿ ಈ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ. 0831-2950306 ಗೆ ಸಂಪರ್ಕಿಸಬಹುದಾಗಿದೆ ಎಂದು ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆಲ್ಕೋ ಸಂಸ್ಥೆಯಿಂದ ಇಂದು ವಿಶೇಷಚೇತನರಿಗೆ ಉದ್ಯೋಗ ಸಮ್ಮೇಳನ: ವಿನಾಯಕ ಹೆಗಡೆ




ಬೆಳಗಾವಿ: " ಸೆಲ್ಕೋ ಸಂಸ್ಥೆಯಿಂದ ವಿಶೇಷಚೇತನರಿಗೆ ಸೌರ ಸ್ವ–ಉದ್ಯೋಗ ಸಮ್ಮೇಳನವನ್ನು ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನ.16 ರಂದು ಬೆಳಗ್ಗೆ 9.30 ರಿಂದ ಸಂಜೆ 5ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಸೆಲ್ಕೋ ಸಂಸ್ಥೆಯ ವಿನಾಯಕ ಹೆಗಡೆ ಹೇಳಿದರು.

ಬುಧವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆಲ್ಕೋ ಸಂಸ್ಥೆ ಕಳೆದ 13 ವರ್ಷಗಳಿಂದ ದೇಶದಾದ್ಯಂತ ಕೆಲಸ ಮಾಡುತ್ತಿದೆ. ನಿರುದ್ಯೋಗಿ ಯುವಕರಿಗೆ ಕೆಲಸ ಕೊಡಿಸುವುದು, ಸಾಮಾಜಿಕ ಸೇವೆ ಮಾಡುತ್ತ ಬಂದಿದೆ. ವಿಶೇಷ ಚೇತನರಿಗೆ ಸೌರ ವಿದ್ಯುತ್ ಮೂಲಕ ಜೀವನೋಪಾಯ ವ್ಯವಸ್ಥೆಗಳನ್ನು ಕಲ್ಪಿಸುವ ಕೆಲಸ ಮಾಡಿದೆ ಎಂದರು.

ಗುರುವಾರ ನ.16 ರಂದು ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಆಯೋಜಿಸಲಾದ ಈ ಉದ್ಯೋಗ ಮೇಳವನ್ನು ಬೆಳಗಾವಿ ಜಿಲ್ಲಾ ಪಂಚಾಯತ ಸಿಇಒ ಹರ್ಷಲ್ ಬೋಯರ್ ಉದ್ಘಾಟನೆ ಮಾಡಲಿದ್ದಾರೆ. ಇದೇ ಸಂದರ್ಭದಲ್ಲಿ ಉದ್ಯೋಗಕ್ಕೆ ಸಂಬಂಧಿಸಿದಂತೆ ಎರಡೂ ಉಪನ್ಯಾಸವನ್ನು ಆಯೋಜಿಸಲಾಗಿದೆ ಎಂದರು.

ಈಗಾಗಲೇ ಸಾಕಷ್ಟು ವಿಶೇಷಚೇತನರಿಗೆ ಸ್ವಾವಲಂಬಿ ಜೀವನ ನಡೆಸಲು ಸೆಲ್ಕೋ ಸಂಸ್ಥೆ ನೆರವಾಗಿದೆ. ಗುರುವಾರ ನಡೆಯುವ ಉದ್ಯೋಗ ಸಮ್ಮೇಳನದಲ್ಲಿ ಭಾಗವಹಿಸುವವರಿಗೆ ಯಾವುದೇ ರೀತಿ ಶುಲ್ಕ ಇಲ್ಲ. ಸಂಪೂರ್ಣ ಉಚಿತವಾಗಿದ್ದು ಇದರ ಲಾಭ ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಕಾಶ ಮೇಟಿ, ವೀರೇಶ ತಡಹಾಳ ಉಪಸ್ಥಿತರಿದ್ದರು.

# ಬಸ್ ಅಪಘಾತ: 38 ಜನ ಸಾವು



ನವದೆಹಲಿ: ಆಳವಾದ ಕಂದಕಕ್ಕೆ ಬಸ್ಸೊಂದು ಬಿದ್ದ ಪರಿಣಾಮ ಕನಿಷ್ಠ 38 ಜನರು ಸಾವನ್ನಪ್ಪಿದ್ದು, ಹಲವು ಜನರು ಗಾಯಗೊಂಡಿರುವ ಘಟನೆ ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯ ಅಸ್ಸಾರ್ ಪ್ರದೇಶದಲ್ಲಿ ನಡೆದಿದೆ.

ಬಸ್ ಬಟೋಟ್–ಕಿಶ್ತ್ವಾರ್ ರಾಷ್ಟ್ರೀಯ ಹೆದ್ದಾರಿಯ ಟ್ರುಂಗಲ್–ಅಸ್ಸಾರ್ ಬಳಿ ಸ್ಕಿಡ್ ಆಗಿ 300 ಅಡಿ ಕೆಳಗೆ ಬಿದ್ದಿದೆ ಎನ್ನಲಾಗಿದೆ.

ಬಸ್ ಸುಮಾರು 40 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿತ್ತು. ರಕ್ಷಣಾ ಕಾರ್ಯಾಚರಣೆ ಆರಂಭಿಸಲಾಗಿದ್ದು, ಕೆಲವು ಮೃತದೇಹಗಳನ್ನು ಹೊರತೆಗೆಯಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಓವರ್‌ಟೇಕ್ ಮಾಡುವ ಪೈಪೋಟಿಯಲ್ಲಿ ಅಪಘಾತ: ಈ ಮಾರ್ಗದಲ್ಲಿ ಮೂರು ಬಸ್‌ಗಳು ಒಟ್ಟಿಗೆ ಸಂಚರಿಸುತ್ತಿದ್ದವು. ಪರಸ್ಪರ ಓವರ್‌ಟೇಕ್ ಮಾಡುವ ಪೈಪೋಟಿಯಲ್ಲಿ ಈ ಭಾರಿ ಅಪಘಾತ ಸಂಭವಿಸಿದೆ ಎಂದು ಪ್ರಾಥಮಿಕ ಮಾಹಿತಿಯಿಂದ ತಿಳಿದು ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ಕರ್ನಾಟಕ ಸಾಧಕ ರತ್ನ ರಾಜ್ಯೋತ್ಸವ ರಾಜ್ಯ ಪ್ರಶಸ್ತಿಗೆ ಜ್ಯೋತಿ ಆಯ್ಕೆ



ಬೆಳಗಾವಿ: ಸಾಹಿತ್ಯ ಕ್ಷೇತ್ರದಲ್ಲಿನ ಸೇವೆ ಗುರುತಿಸಿ ಸಾಹಿತಿ ಜ್ಯೋತಿ ಮಾಳಿ ಅವರಿಗೆ "ಕರ್ನಾಟಕ ಸಾಧಕ ರತ್ನ ರಾಜ್ಯೋತ್ಸವ ರಾಜ್ಯ ಪ್ರಶಸ್ತಿಗೆ" ಆಯ್ಕೆ ಮಾಡಲಾಗಿದೆ.

ಗೋಕಾಕಿನ ನಾಡಿನ ಸಮಾಚಾರ ಸೇವಾ ಸಂಘ (ರಿ), ಹಾಗೂ ಗೋಕಾಕ ನಾಡಿನ ಸಮಾಚಾರ ದಿನಪತ್ರಿಕೆ ಸೇವಾ ಬಳಗ ಇವರ ಸಂಯುಕ್ತಾಶ್ರಯದಲ್ಲಿ 68ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ನ. 18ರಂದು ಬೆಳಗ್ಗ 10:00 ಗಂಟೆಗೆ ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ "ಕನ್ನಡ ನುಡಿ ಸಂಭ್ರಮ" ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ 'ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದ್ದು, ಸಾಹಿತ್ಯ ಕ್ಷೇತ್ರದಲ್ಲಿನ ಸೇವೆಯನ್ನು ಗುರುತಿಸಿ ಸಾಹಿತಿ ಜ್ಯೋತಿ ಮಾಳಿ ಅವರಿಗೆ "ಕರ್ನಾಟಕ ಸಾಧಕ ರತ್ನ ರಾಜ್ಯೋತ್ಸವ ರಾಜ್ಯ ಪ್ರಶಸ್ತಿ ನೀಡಲಾಗುವುದು ಎಂದು ಗೋಕಾಕಿನ ನಾಡಿನ ಸಮಾಚಾರ ಸೇವಾ ಸಂಘದ ಅಧ್ಯಕ್ಷ ಬಸವರಾಜ ಉಪ್ಪಾರಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಂಡೆ ಸಾಮಗ್ರಿ ವಿತರಿಸಿದ ರಾಹುಲ್ ಜಾರಕಿಹೊಳಿ



ಗೋಕಾಕ: ನಗರದ ಹಿಲ್ ಗಾರ್ಡನ್ ಕಛೇರಿಯಲ್ಲಿ ಯಮಕನಮರಡಿ ಮತಕ್ಷೇತ್ರದ ಹಗೆದಾಳ, ಹಳೆ ಹೊಸುರ ಗ್ರಾಮದ ಸಾಮಾಜಿಕ ಕಾರ್ಯಗಳಿಗೆ ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಬಾಂಡೆ ಸಾಮಗ್ರಿಗಳ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ವಿವರಿಸಲಾಯಿತು.

ಈ ಸಂದರ್ಭದಲ್ಲಿ ಹಿಲ್ ಗಾರ್ಡನ್ ಸಿಬ್ಬಂದಿಗಳಾದ ವಿಠ್ಠಲ ಪರಸನ್ನವರ, ಪಾಂಡು ರಂಗಸುಭೆ, ಮಾರುತಿ ಗುಟಗುದ್ದಿ, ಹಾಗೂ ಊರಿನ ಮುಖಂಡರಾದ ಗಂಗಪ್ಪಾ ವರಗ, ಲಗಮಣ್ಣ, ಹುಂದರಿ, ಲಕ್ಷ್ಮಣ ವರಗ, ಲಗಮಪ್ಪಾ ವರಗ, ಪಕಿರಪ್ಪಾ ವರಗ, ಭೀಮ್ಮಪ್ಪಾ ಬಂಜಿರಾಮ, ಈರಪ್ಪಾ ಬಂಜಿರಾಮ, ಬಸವಣ್ಣಿ ಬಿಚಗತ್ತಿ, ಯಲಗುಂಡ ಕಾರಣವರ, ಕಾಸಪ್ಪಾ ಗೋರಗುದ್ದಿ ಬಸವಣ್ಣಿ ಬಂಜಿರಾಮ ಹಾಗೂ ಅನೇಕರು ಉಪಸ್ಥಿತರಿದ್ದರು.

# ಬೈಕ್ ಡಿಕ್ಕಿಯಾಗಿ ಬೆಳಗಾವಿಯ ಪೊಲೀಸ್ ಪೇದೆ ಸಾವು



ಬೆಳಗಾವಿ: ಠಾಣೆಗೆ ಕರ್ತವ್ಯ ನಿರ್ವಹಿಸಲು ಹೋಗುವ ಸಂದರ್ಭದಲ್ಲಿ ರಸ್ತೆ ಪಕ್ಕದಲ್ಲಿ ನಿಂತಾಗ ದ್ವಿಚಕ್ರ ವಾಹನ ಬಂದು ಡಿಕ್ಕಿ ಹೊಡೆದ ಪರಿನಾಮ ಪೊಲೀಸ್ ಪೇದೆಯೊರ್ವರು ಸಾವನ್ನಪ್ಪಿರುವ ಘಟನೆ ಕಾಕತಿ ಪೊಲೀಸ ಠಾಣೆಯ ಎದುರು ಸಂಭವಿಸಿದೆ.

ಬೈಲಹೊಂಗಲ ತಾಲೂಕಿನ ನಾವಲಗಟ್ಟಿ ಗ್ರಾಮದ ನಿವಾಸಿಯಾದ 35 ವರ್ಷ ದ ಫಕ್ಕೀರಪ್ಪಾ ಅರ್ಜುನ ಉಪ್ಪಾರಟ್ಟಿ ಅಪಘಾತದಲ್ಲಿ ಸಾವನ್ನಪ್ಪಿರುವ ದುರ್ದೈವಿ. ಇವರು ರಾತ್ರಿ ವೇಳೆ ಎಪಿಎಂಸಿ ಠಾಣೆಗೆ ಕರ್ತವ್ಯ ನಿರ್ವಹಿಸಲು ಹೋಗುವ ಸಂದರ್ಭದಲ್ಲಿ ರಸ್ತೆ ಪಕ್ಕದಲ್ಲಿ ನಿಂತಾಗ ದ್ವಿಚಕ್ರ ವಾಹನ ಬಂದು ಡಿಕ್ಕಿ ಹೊಡೆದಿದೆ. ಇದರಿಂದ ಗಂಭೀರವಾಗಿ ಗಾಯಗೊಂಡ ಪೇದೆ ಮೃತಪಟ್ಟಿದ್ದಾರೆ. ಈ ಕುರಿತು ಕಾಕತಿ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ದೀಪಾವಳಿ ಪಾಡ್ಯಮಿಗೆ ರೈತರ ಸಂಭ್ರಮ




ಕೆಂಭಾವಿ: ಅಂಧಕಾರ ಅಳಿದು ಪ್ರತಿಯೊಬ್ಬರ ಮನೆ ಮನಗಳಲ್ಲಿ ಜ್ಞಾನದ ಜ್ಯೋತಿ ಬೆಳಗಲಿ ಎಂಬ ಸಂಕೇತವಾಗಿ ಹಬ್ಬಗಳ ರಾಜ ದೀಪಾವಳಿ ಹಾಗೂ ಪಾಡ್ಯೆಮಿ ಹಬ್ಬವನ್ನು ಪಟ್ಟಣ ಸೇರಿದಂತೆ ವಲಯದಾದ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ರವಿವಾರ ಅಮಾವಾಸ್ಯೆ ದಿನ ವ್ಯಾಪಾರಸ್ಥರು ತಮ್ಮ ತಮ್ಮ ಅಂಗಡಿ ಮುಂಗಟ್ಟುಗಳನ್ನು ಸ್ವಚ್ಛಗೊಳಿಸಿ ಲಕ್ಷ್ಮೀ ಪೂಜೆ ನೆರವೇರಿಸಿ ಧನ್ಯತಾ ಭಾವ ಹೊಂದಿದರೆ ಮಕ್ಕಳು ಯುವಕರು ಪಟಾಕಿ ಸಿಡಿಸಿ ಸಂಭವಿಸಿದರು.

ಅಮವಾಸ್ಯೆ ಮರುದಿನ ಸೋಮವಾರ ರೈತಾಪಿ ವರ್ಗಕ್ಕೆ ವಿಶೇಷ ದಿನ ಪಾಡ್ಯಮಿಯಂದು ತಮ್ಮ ದನ ಕರುಗಳನ್ನು ಕಿಚ್ಚು ಹಾಯಿಸಿ ಪೀಡೆ ತೊಲಗಲಿ ಎಂಬಂತೆ ಜಾನಪದ ಸಾಂಪ್ರದಾಯಿಕ ಹಾಡುಗಳು ಹಾಡುತ್ತಾ, " ಹಂಡಕಳೋ ಬಂಡಕಳೋ, ಕಲಬುರಗಿ ದಾರ್ಯಾಗ ಕಳ್ಳರು ಕೂತಾರ, ಕಳ್ಳರ ಕೈಯ್ಯಾಗ ಬೆಳ್ಳಿಯ ಕುಡುಗೋಲ, ಬೆಳ್ಳಿಯ ಕುಡುಗೋಲಿಗೆ ಮಾರ್ ಮಾರ್ ಹುಲ್ಲ, ಬೂರ್ ಬೂರ್ ಮೊಸರ, ಬೂರ್ ಬೂರ್ ಮೊಸರಿಗೆ ಕಣಿ ಕಣಿ ತುಪ್ಪ, ಆಣಿ ಪಿಣಿ ನಮ್ಮ ಹೋರಿಗೋಳ್ ಪೀಡಾ ಹೋಗಲಿ ಥೀ ಥೂ ಎಂದು ಇಂಥಹ ಸಂಪ್ರಾದಾಯಿಕ ಹಾಡುಗಳು ನಮ್ಮ ರೈತರು ಬಾಯಲ್ಲಿ ಹೇಳುವದರ ಮೂಲಕ ತಮ್ಮ ಪಶುಗಳಿಗೆ ಪೀಡೆ ತೊಲಗಲಿ, ಸಂಪತ್ತು ವೃದ್ಧಿಸಲಿ ಎಂದು ದನಕರುಗಳಿಗೆ ಪೂಜೆ ಸಲ್ಲಿಸಿದರೆ, ರೈತ ಮಹಿಳೆಯರು ಮನೆಯಂಗಳದಲ್ಲಿ ಆಕಳು ಸಗಣಿಯಿಂದ ಪಾಂಡವರನ್ನು ತಯಾರಿಸಿ ಕೋಟೆ ನಿರ್ಮಿಸಿ ಗೋಲಾಕಾರದಲ್ಲಿ ಕೂಡಿಸಿ, ಮಧ್ಯದಲ್ಲಿ ಕೂಸಿನೊಂದಿಗೆ ಬಾಣಂತಿ ಕೂತಿರುವಂತೆ ಮಾಡಿ, ತಲೆಯಲ್ಲಿ ಅಂಬ್ರೆ ಹೂ, ಹಳದಿ ಹೂ ಮುಡಿಸಿ, ಉತ್ತರಾಣಿ ಕಡ್ಡಿಯಿಂದ ಪೂಜೆ ಸಲ್ಲಿಸಿ, ತುಪ್ಪ ಮೊಸರು ಬೆಲ್ಲದ ನೈವೇದ್ಯ ಮಾಡಿದರು. ಮಕ್ಕಳು ಕೌರವನೆಂದು ಗುರುತಿಸಿದ ಸಗಣಿ ಗೊಂಬೆಯ ಹೊಟ್ಟೆಗೆ ಪಟಾಕಿ ಇಟ್ಟು ಸಿಡಿಸಿ ಸಂಭ್ರಮ ಪಟ್ಟರು.

ಇಂದಿನ ಆಧುನಿಕ ಜಗತ್ತಿನಲ್ಲಿ ನಮ್ಮ ಜನಪದ ಸಂಪ್ರದಾಯಗಳು ಕಣ್ಮರೆಯಾಗುತ್ತಿವೆ ಎಂಬ ಕೊರಗಿನ ಮಧ್ಯೆ ಉತ್ತರ ಕರ್ನಾಟಕ ಗ್ರಾಮೀಣ ಭಾಗಗಳಲ್ಲಿ ಇಂಥಹ ಜನಪದ ರೂಢಿ ಸಂಪ್ರದಾಯಗಳು ಉಳಿದುಕೊಂಡಿವೆ ಎಂಬುವುದೆ ಖುಷಿಯ ಸಂಗತಿ ಎಂದು ಹೇಳಬಹುದು.

# ಬೆಳಗಾವಿ ಮೂಲದ ಯುವತಿಯಿಂದ ಖಾಸಗಿ ಕಂಪನಿಗೆ ಬಾಂಬ್ ಬೆದರಿಕೆ ಕರೆ




ಬೆಳಗಾವಿ: ಬೆಂಗಳೂರಿನ ಇಲೆಕ್ಟ್ರಾನಿಕ್ ಸಿಟಿಯಲ್ಲಿರುವ ಖಾಸಗಿ ಕಂಪನಿಯೊಂದಕ್ಕೆ ಯುವತಿಯೊಬ್ಬಳು ಬಾಂಬ್ ಬೆದರಿಕೆ ಕರೆ ಮಾಡಿದ್ದು, ಯುವತಿ ಬೆಳಗಾವಿ ಮೂಲದವಳು ಎಂದು ಪೊಲೀಸರು ಪತ್ತೆ ಹಚ್ಚಿದ್ದಾರೆ.

ಬೆಳಗಾವಿಯ ಶಾಹುನಗರ ನಿವಾಸಿ ಶೃತಿ ಶೆಟ್ಟಿ ಬೆಂಗಳೂರಿನ ಇಲೆಕ್ಟ್ರಾನಿಕ್ ಸಿಟಿಯಲ್ಲಿರುವ ಖಾಸಗಿ ಕಂಪನಿಗೆ ಬಾಂಬ್ ಬೆದರಿಕೆ ಕರೆ ಮಾಡಿದ್ದಾಳೆ. ಕರೆ ಮಾಡಿದ್ದ ಶೃತಿ ಬೆಂಗಳೂರಿನಲ್ಲಿ ಈ ಮೊದಲು ಅದೇ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಳು. ಹೆಚ್ಚಿನ ವಿದ್ಯಾಭ್ಯಾಸಕ್ಕೆಂದು ಕೆಲಸ ತೊರೆದು ಶೃತಿ ಬಂದಿದ್ದಳು. ವಿದ್ಯಾಭ್ಯಾಸದ ಬಳಿಕ ಶೃತಿಯನ್ನು ರೀ ಜಾಯಿನ್ ಮಾಡಿಕೊಳ್ಳಲು ಕಂಪನಿ ಹಿಂದೇಟು ಹಾಕಿದೆ. ಇದರಿಂದ ಮಾನಸಿಕವಾಗಿ ಕುಗ್ಗಿ ಬಾಂಬ್ ಬೆದರಿಕೆ ಕರೆ ಮಾಡಿದ್ದಾಳೆ ಎಂದು ಮೂಲಗಳು ತಿಳಿಸಿವೆ.

ಸದ್ಯ ಶೃತಿಯನ್ನು ವಶಕ್ಕೆ ಪಡೆಯಲು ಬೆಂಗಳೂರಿನ ಪೊಲೀಸ್ ತಂಡ ಬೆಳಗಾವಿಗೆ ಆಗಮಿಸಿತ್ತು.

ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯ ಪಿಎಸ್‌ಐ ಮೆಹಬೂಬ್ ಹಾಗೂ ಮಹಿಳಾ ಪೊಲೀಸ್ ಪೇದೆ, ಶೃತಿ ಮನೆಗೆ ಆಗಮಿಸಿದ್ದು, ಇವರಿಗೆ ಬೆಳಗಾವಿ ಎಪಿಎಂಸಿ ಠಾಣೆ ಸಿಪಿಐ, ಪಿಎಸ್‌ಐ ಸೇರಿ ಪೊಲೀಸ್ ಸಿಬ್ಬಂದಿ ಸಾಥ್ ನೀಡಿದ್ದಾರೆ.

ಯುವತಿ ಶೃತಿ ಶೆಟ್ಟಿಯನ್ನು ವಿಚಾರಣೆ ನಡೆಸಿದ ಪರಪ್ಪನ ಅಗ್ರಹಾರ ಪೊಲೀಸರು ಹುಸಿ ಬಾಂಬ್ ಕರೆ ಮಾಡಿರುವ ಕುರಿತು ಪ್ರಾಥಮಿಕ ಮಾಹಿತಿ ಪಡೆದಿದ್ದಾರೆ. ಈ ವೇಳೆ ಎರಡನೇ ಬಾರಿಗೆ ಕಂಪನಿಯಲ್ಲಿ ಕೆಲಸಕ್ಕೆ ಸೇರಿಸಿಕೊಳ್ಳದಿದ್ದಕ್ಕೆ ಕರೆ ಮಾಡಿರುವುದಾಗಿ ಯುವತಿ ಹೇಳಿದ್ದಾಳೆ. ತಾಯಿಯ ಮೊಬೈಲ್‌ನಿಂದ ಇಂದು ಬೆಳಗ್ಗೆ ಕರೆ ಮಾಡಿರುವುದಾಗಿ ಶೃತಿ ಹೇಳಿಕೆ ನೀಡಿದ್ದಾಳೆ. ಬಳಿಕ ಬುಧವಾರ ಪರಪ್ಪನ ಅಗ್ರಹಾರ ಠಾಣೆಗೆ ವಿಚಾರಣೆಗೆ ಆಗಮಿಸುವಂತೆ ಶೃತಿಗೆ ನೋಟಿಸ್ ನೀಡಲಾಗಿದೆ. ಯುವತಿ ಶೃತಿ, ಆಕೆಯ ತಂದೆ–ತಾಯಿಗೆ ಠಾಣೆಗೆ ಬರುವಂತೆ ಪೊಲೀಸರು ನೋಟಿಸ್ ನೀಡಿ ತೆರಳಿದ್ದಾರೆ

# ಗೋಕಾಕ್ ಯುವಕನ ಕೊಲೆ ಕೇಸ್: ಏಳು ಜನ ಆರೋಪಿಗಳ ಬಂಧನ

ಬೆಳಗಾವಿ: ಭಾನುವಾರ ರಾತ್ರಿ ಗೋಕಾಕ್ ಪಟ್ಟಣದಲ್ಲಿ ನಡೆದ ಯುವಕನ ಬರ್ಬರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಅಪ್ರಾಪ್ತ ಸೇರಿದಂತೆ ಒಟ್ಟು ಏಳು ಜನ ಆರೋಪಿಗಳನ್ನು ಕೆಲವೇ ಗಂಟೆಗಳಲ್ಲಿ ಬಂಧಿಸುವಲ್ಲಿ ಗೋಕಾಕ್ ಪೊಲೀಸರು ಯಶಸ್ವಿಯಾಗಿದ್ದಾರೆ.

ಗೋಕಾಕ್ ಪಟ್ಟಣದ ಆದಿಜಾಂಬವ ನಗರದ ಶಾನೂರ (ಸಂತೋಷ) ಪೂಜೇರಿ 26 ವರ್ಷ ಕೊಲೆಯಾದ ಯುವಕ. ಮೃತ ಶಾನೂರ ಸ್ಥಳೀಯ ಪೆಟ್ರೋಲ್ ಪಂಪ್ನಲ್ಲಿ ಕೆಲಸ ಮಾಡುತ್ತಿದ್ದ. ಭಾನುವಾರ ಪೆಟ್ರೋಲ್ ಪಂಪ್ನಲ್ಲಿ ಪೂಜೆ ಮುಗಿಸಿಕೊಂಡು ಮರಳಿ ಮನೆಗೆ ಹೋಗುವ ಸಂದರ್ಭದಲ್ಲಿ ದಾಳಿ ಮಾಡಿದ ಆರೋಪಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಶಾನೂರನನ್ನು ಕೊಲೆಗೈದು ಪರಾರಿಯಾಗಿದ್ದರು. ಈ ಘಟನೆ ದೀಪಾವಳಿ ಹಬ್ಬದ ಆಚರಣೆಯಲ್ಲಿ ತೊಡಗಿದ್ದ ಗೋಕಾಕ್ ಜನರನ್ನು ಬೆಚ್ಚಿ ಬೀಳುವಂತೆ ಮಾಡಿತ್ತು.



ಬಂಧಿತ ಆರೋಪಿಗಳು; ಕೆಲವೇ ಗಂಟೆಗಳಲ್ಲಿ ಆರೋಪಿಗಳ ಬಂಧನ: ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಗೋಕಾಕ್ ಶಹರ್ ಠಾಣೆಯ ಪೊಲೀಸರು ಕೊಲೆ ಆರೋಪದಲ್ಲಿ ಕಾನೂನು ಸಂಘರ್ಷಕ್ಕೆ ಒಳಪಟ್ಟ ಬಾಲಕ ಸೇರಿ ಒಟ್ಟು 7 ಜನರನ್ನು ಘಟನೆ ನಡೆದ ಕೆಲವೇ ಗಂಟೆಗಳಲ್ಲಿ ಬಂಧಿಸಿದ್ದಾರೆ. ಸುನೀಲ ಮೇಸ್ತ್ರಿ(25), ಕಾಡಪ್ಪ ಮೇಟ್ರಿ (54), ಶಿವಕುಮಾರ ಬಸವರಾಜ (24), ವಾಸುದೇವ ಮೇಸ್ತ್ರಿ (20), ಸಂಜಯ ಮೇಸ್ತ್ರಿ (22), ಹನುಮಂತ (22) ಬಂಧಿತ ಆರೋಪಿಗಳು ಎಂದು ಗುರುತಿಸಲಾಗಿದೆ.

ಉದ್ರಿಕ್ತರಿಂದ ಆರೋಪಿ ಮನೆ ಮೇಲೆ ಕಲ್ಲು ತೂರಾಟ: ಶಾನೂರ ಕೊಲೆಯಾದ ಸುದ್ದಿ ತಿಳಿಯುತ್ತಿದ್ದಂತೆ ಉದ್ರಿಕ್ತಗೊಂಡ ಆತನ ಸಂಬಂಧಿಕರು ಆರೋಪಿ ಮನೆ ಮೇಲೆ ಕಲ್ಲು ತೂರಾಟ ನಡೆಸಿ ಆಕ್ರೋಶ ವ್ಯಕ್ತಪಡಿಸಿದ್ದರು. ಇದರಿಂದ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.

ಸ್ಥಳಕ್ಕೆ ದೌಡಾಯಿಸಿದ ಗೋಕಾಕ್ ಶಹರ್ ಪೊಲೀಸರು ಅವರನ್ನು ಸಮಾಧಾನಪಡಿಸಿ ಪರಿಸ್ಥಿತಿ ಹತೋಟಿಗೆ ತಂದರು. ಬಳಿಕ ಪೊಲೀಸ್ ಠಾಣೆಗೆ ಆಗಮಿಸಿದ ಶಾನೂರ ಕುಟುಂಬಸ್ಥರು ಮತ್ತು ಸ್ನೇಹಿತರು ಆರೋಪಿಗಳನ್ನು ತಕ್ಷಣವೇ ಬಂಧಿಸುವಂತೆ ಪಟ್ಟು ಹಿಡಿದು ಪ್ರತಿಭಟನೆ ನಡೆಸಿದರು.

ರಾತ್ರೋರಾತ್ರಿ ಸ್ಥಳಕ್ಕೆ ಆಗಮಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಪ್ರತಿಭಟನಾಕಾರರನ್ನು ಮನವೊಲಿಸಿ ಆರೋಪಿಗಳನ್ನು ಬಂಧಿಸುವುದಾಗಿ ಭರವಸೆ ನೀಡಿದ ಬಳಿಕವೇ ಪ್ರತಿಭಟನೆ ವಾಪಸ್ ಪಡೆದಿದ್ದರು.

ಸೋಮವಾರ ಬಿಗಿ ಪೊಲೀಸ್ ಬಂದೋಬಸ್ತ್ ನಡುವೆ ಮೃತ ಶಾನೂರ ಅಂತ್ಯಕ್ರಿಯೆ ನೆರವೇರಿಸಲಾಯಿತು. ಈ ವೇಳೆ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಆರು ತಿಂಗಳ ಹಿಂದೆಯಷ್ಟೇ ಶಾನೂರ ವಿವಾಹವಾಗಿದ್ದು, ಆತನ ಪತ್ನಿ ಈಗ ಗರ್ಭಿಣಿಯಾಗಿದ್ದಾರೆ. ಯುವಕನ ಕೊಲೆ ಪ್ರಕರಣದಲ್ಲಿ ಓರ್ವ ಅಪ್ರಾಪ್ತ ಸೇರಿದಂತೆ ಏಳು ಆರೋಪಿಗಳನ್ನು ಬಂಧಿಸಿ ತೀವ್ರ ವಿಚಾರಣೆಗೆ ಒಳಪಡಿಸಿದ್ದೇವೆ. ಪ್ರಕರಣದ ಕುರಿತು ಹೆಚ್ಚಿನ ತನಿಖೆ ಕೈಗೊಂಡಿದ್ದೇವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಮಾಹಿತಿ ನೀಡಿದ್ದಾರೆ.

# ಬೆಳಗಾವಿ: ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು 4 ಕುರಿ ಸೇರಿದಂತೆ ಲಕ್ಷಾಂತರ ರೂ. ನಗದು ಸುಟ್ಟು ಭಸ್ಮ



ಬೆಳಗಾವಿ: ದೀಪಾವಳಿಗೆ ಹಚ್ಚಿದ ದೀಪದ ಬೆಂಕಿ ಮನೆಗೆ ಹಬ್ಬಿ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಮನೆಯಲ್ಲಿರುವ 4 ಕುರಿಗಳು ಸೇರಿದಂತೆ 4.75 ಲಕ್ಷ ರೂ. ಹಣ ಸುಟ್ಟು ಕರಕಲಾಗಿರುವ ಘಟನೆ ಬೆಳಗಾವಿಯ ಬಸವನ ಕುಡಚಿ ಗ್ರಾಮದಲ್ಲಿ ನಡೆದಿದೆ.

ಹೌದು ಬಸವನ ಕುಡಚಿ ಗ್ರಾಮದ ಸವಿತಾ ದುನ್ನೊಳ್ಳಿ ಮತ್ತು ಅನಿತಾ ಕೌಲಗಿ ಎಂಬ ಸಹೋದರಿಯರಿಗೆ ಸೇರಿದ ಎರಡೂ ಮನೆಗಳು ಬೆಂಕಿಗೆ ಆಹುತಿಯಾಗಿವೆ. ದೀಪಾವಳಿ ಹಬ್ಬದ ನಿಮಿತ್ತ ದೇವರ ಮುಂದೆ ಹಚ್ಚಿದ್ದ ದೀಪದಿಂದ ಬೆಂಕಿ ಕಾಣಿಸಿಕೊಂಡಿದೆ. ಬಳಿಕ ಸಿಲಿಂಡರ್ ಬ್ಲಾಸ್ಟ್ ಆಗಿ ಬೆಂಕಿಯ ಕೆನ್ನಾಲೆಗೆ ನೋಡ ನೋಡುತ್ತಿದ್ದಂತೆ ಎರಡೂ ಮನೆಗಳು ಸುಟ್ಟು ಕರಕಲಾಗಿವೆ.

ಬೆಂಕಿ ಅವಘಡದಲ್ಲಿ 4 ಕುರಿಗಳು ಸಜೀವ ದಹನವಾಗಿದ್ದು, ಒಟ್ಟು 4.75 ಲಕ್ಷ ರೂ. ಹಣ, 50 ಗ್ರಾಂ ಬಂಗಾರದ ಆಭರಣಗಳು, ಬೆಳ್ಳಿ ಆಭರಣಗಳು, ದಿನಬಳಕೆ ವಸ್ತುಗಳು, ಪಾತ್ರೆಗಳು, ಬ್ಯಾಂಕ್ ಪಾಸ್ ಬುಕ್, ಮನೆ ದಾಖಲೆಗಳು, ಬಟ್ಟೆಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿವೆ.

ಅದೃಷ್ಟವಶಾತ್ ಮನೆಯವರೆಲ್ಲಾ ಹೊರಗಡೆ ಹೋಗಿದ್ದರಿಂದ ಯಾವುದೇ ಜೀವಹಾನಿ ಆಗಿಲ್ಲ. ಘಟನೆ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ, ಸ್ಥಳೀಯರು ಹಾಗೂ ಮಾಳಮಾರುತಿ ಠಾಣೆ ಪೊಲೀಸರು ಬೆಂಕಿ ನಂದಿಸಲು ಹರ ಸಾಹಸ ಪಟ್ಟರು.

# ಅತಿಸಾರ ಬೇಧಿ ನಿರ್ಲಕ್ಷ್ಯ ಬೇಡ–ಸೂಕ್ತ ಚಿಕಿತ್ಸೆ ಪಡೆಯುವಂತೆ ಡಿಸಿ ಸಲಹೆ

ಶಿವಮೊಗ್ಗ: ಮಕ್ಕಳಲ್ಲಿ ಕಂಡುಬರುವ ಅತಿಸಾರ ಬೇಧಿಯನ್ನು ಯಾವುದೇ ಕಾರಣಕ್ಕೂ ನಿರ್ಲಕ್ಷಿಸಬಾರದು. ಕೂಡಲೇ ಸೂಕ್ತ ಚಿಕಿತ್ಸೆ ಕೊಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸೆಲ್ವಮಣಿ ಆರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಬಸವನಗುಡಿ ಅಂಗನವಾಡಿ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ತೀವ್ರತರ ಅತಿಸಾರ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಸಾವಿನ ಪ್ರಕರಣದಲ್ಲಿ ಮುಖ್ಯ ಕಾರಣ ಅತಿಸಾರ ಬೇಧಿ ಆಗಿದೆ. ವರ್ಷದಲ್ಲಿ ಪ್ರತಿ ಸಾವಿರ ಮಕ್ಕಳಲ್ಲಿ 14 ಮಕ್ಕಳ ಮರಣವಾಗುತ್ತಿದ್ದು ಅದರಲ್ಲಿ 5 ಮಕ್ಕಳು ಅತಿಸಾರ ಬೇಧಿಯಿಂದ ಸಾವನ್ನಪ್ಪುತ್ತಿದ್ದಾರೆ. ಆದರಿಂದ ಅತಿಸಾರ ಬೇಧಿ ಕುರಿತು ನಿರ್ಲಕ್ಷ್ಯ ಸಲ್ಲದು. ಬೇಧಿಗೆ ಏನು ಸೂಕ್ತ ಚಿಕಿತ್ಸೆ ಎಂದು ಗೊತ್ತಾಗದೇ ಪೋಷಕರು ಅವೈಜ್ಞಾನಿಕ ಪದ್ದತಿಯನ್ನು ಅನುಸರಿಸಿ ಮಗು ಸುಸ್ತಾದ ಮೇಲೆ ಆಸ್ಪತ್ರೆಗೆ ಕರುತರುತ್ತಾರೆ. ಇದು ಸರಿಯಲ್ಲ.

ಅತಿಸಾರ ಬೇಧಿಯಿಂದಾಗುವ ಮಕ್ಕಳ ಸಾವನ್ನು ತಪ್ಪಿಸಲು ಸರ್ಕಾರ ತೀವ್ರತರ ಅತಿಸಾರ ನಿಯಂತ್ರಣ ಪಾಕ್ಷಿಕದಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಈ ಪಾಕ್ಷಿಕದಲ್ಲಿ ಪ್ರತಿ ಮನೆ ಮನೆಗೆ ಆಶಾ, ಅಂಗನವಾಡಿ ಕಾರ್ಯಕರ್ತೆಯರು ಬಂದು ಅತಿಸಾರ ಬೇಧಿ ನಿಯಂತ್ರಣ ಕುರಿತು ಜಾಗೃತಿ ಮೂಡಿಸುವರು. ಹಾಗೂ ಓಆರ್‌ಎಸ್ ಪಾನಕ ತಯಾರಿಸುವ ಬಗೆಯನ್ನು ತಿಳಿಸಿ ಓಆರ್‌ಎಸ್ ಪೊಟ್ಟಣ ನೀಡುವರು. ಈ ಪಾನಕ ಮಾಡುವುದು ಕಷ್ಟವಲ್ಲ. ಸರಳವಾಗಿದ್ದು, ಇದನ್ನು ಬೇಧಿ ಆಗುವ ಸಮಯ ನೀಡಲೇಬೇಕು. ಇದಿಲ್ಲವಾದರೆ ಮನೆಯಲ್ಲಿ ನೀರನ್ನು ಕಾಯಿಸಿ ಆರಿಸಿ ಅದಕ್ಕೆ ಚಿಟಕಿ ಉಪ್ಪು ಮತ್ತು ಸಕ್ಕರೆ ಸೇರಿಸಿದ ನೀರನ್ನು ನೀಡುತ್ತಿರಬೇಕು ಎಂದರು.

ಮಕ್ಕಳು ಆರೋಗ್ಯವಾಗಿರಲು ಕಾಲಕಾಲಕ್ಕೆ ಲಸಿಕೆಗಳನ್ನು ಹಾಕಿಸಬೇಕು. ಪೋಲೀಯೋ ಲಸಿಕೆ ಅಭಿಯಾನಗಳಿಂದಾಗಿ ಈಗ ದೇಶ ಪೋಲೀಯೋ ಮುಕ್ತವಾಗಿದೆ. ಅದೇ ರೀತಿ ಅತಿಸಾರ ಬೇಧಿ ಮುಕ್ತ ಹೀಗೆ ಎಲ್ಲ ರೋಗಗಳಿಂದ ಮುಕ್ತವಾಗಲು ಎಲ್ಲ ಚುಚ್ಚುಮದ್ದುಗಳನ್ನು ಯಾವುದೇ ಹಿಂಜರಿಕೆ, ನಿರ್ಲಕ್ಷ್ಯ ವಹಿಸದೇ ಮಕ್ಕಳಿಗೆ ಕೊಡಿಸಬೇಕು ಎಂದು ತಾಯಂದಿರಿಗೆ ಕಿವಿ ಮಾತು ಹೇಳಿದರು.

ಪಾಲಿಕೆ ಸದಸ್ಯ ರಮೇಶ್ ಹೆಗಡೆ ಮಾತನಾಡಿ, ಮೊದಲು ಜನರ ರಕ್ಷಣೆ ಮತ್ತು ಆಡಳಿತ ಮಾತ್ರ ಸರ್ಕಾರದ ಕರ್ತವ್ಯವಾಗಿತ್ತು. ಆದರೆ ಈಗ ಎಲ್ಲರ ಕಲ್ಯಾಣ ಮತ್ತು ಆರೋಗ್ಯ ಸರ್ಕಾರದ ಹೊಣೆಯಾಗಿದೆ.




ಆದ್ದರಿಂದ ಸರ್ಕಾರ ಆರೋಗ್ಯಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದು, ತಾಯಂದಿರಾದ ನೀವು ಅತಿಸಾರ ಬೇಧಿ ನಿಯಂತ್ರಣ, ಲಸಿಕೆ ಹಾಕಿಸುವುದು ಸೇರಿದಂತೆ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ತಿಳಿದುಕೊಂಡು ಸಮುದಾಯದಲ್ಲಿ ಈ ಕುರಿತು ಉಳಿದವರಿಗೂ ತಿಳಿಸಬೇಕು.

ಕೋವಿಡ್ ಸಮಯದಲ್ಲಿ ವೈದ್ಯರು, ವಿಜ್ಞಾನಿಗಳು, ಜಿಲ್ಲಾಡಳಿತ, ಆಶಾ, ಅಂಗನವಾಡಿ ಕಾರ್ಯಕರ್ತರು, ಪೌರಕಾರ್ಮಿಕರು ತಮ್ಮ ಜೀವದ ಹಂಗು ತೊರೆದು ಸೇವೆ ಸಲ್ಲಿಸಿರುವುದು ಅಭಿನಂದನೀಯ. ನಮ್ಮ ಮಕ್ಕಳಿಗೆ, ಯಾವುದೇ ರೀತಿಯ ಅನಾರೋಗ್ಯ ಬಾರದಂತೆ ತಾಯಂದಿರು, ಎಲ್ಲ ನಾಗರೀಕರು ನೋಡಿಕೊಳ್ಳಬೇಕೆಂದರು.

ಡಿಹೆಚ್‌ಓ ಡಾ.ರಾಜೇಶ್ ಸುರಗಿಹಳ್ಳಿ ಮಾತನಾಡಿ, ಯಾವುದೇ ಮಗುವಿಗೆ ಕನಿಷ್ಟ 2 ವರ್ಷದವರೆಗೆ ತಾಯಿ ಹಾಲನ್ನು ಕುಡಿಸಬೇಕು. ಆರು ತಿಂಗಳವರೆಗೆ ಯಾವುದೇ ಪೂರಕ ಆಹಾರ ನೀಡದೆ ಕೇವಲ ಎದೆಹಾಲು ಕುಡಿಸಬೇಕು.

ಮಗುವಿಗೆ ಬೇಧಿ ಶುರುವಾಗಿದೆ ಎಂದು ಎದೆ ಹಾಲು ನಿಲ್ಲಿಸಬಾರದು. ಯಾಕೆಂದರೆ ತಾಯಿಹಾಲಿನಲ್ಲಿ ಸಾಕಷ್ಟು ಪ್ರಮಾಣದ ಪೌಷ್ಟಿಕಾಂಶ ಜೊತೆಗೆ ನೀರು ಇರುವುದರಿಂದ ಇದು ಅತ್ಯುತ್ತಮ ಆಹಾರ. ಶೇ.80 ರಷ್ಟು ವೈರಲ್ ಅತಿಸಾರ ಬೇಧಿಗೆ ರೋಟಾವೈರಸ್ ಲಸಿಕೆ ನೀಡಲಾಗುವುದು. ಸ್ವಚ್ಚತೆ, ಕೈತೊಳೆಯುವುದಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು, ಅತಿಸಾರ ಬೇಧಿ ವೇಳೆ ಹಣ್ಣಿನ ರಸ, ನಿಂಬೆ ಪಾನಕ, ಚಿಟಿಕೆ ಉಪ್ಪು ಮತ್ತು ಸಕ್ಕರೆ ಮಿಶ್ರಿತ ನೀರು ಅಥವಾ ಓಆರ್‌ಎಸ್ ಪಾನಕವನ್ನು ನೀಡುತ್ತಿರಬೇಕು ಎಂದು ಸಲಹೆ ನೀಡಿದರು.

ಆರ್‌ಸಿಹೆಚ್ ಅಧಿಕಾರಿ ಡಾ.ನಾಗರಾಜ್ ನಾಯ್ಕ್ ಮಾತನಾಡಿ ಅತಿಸಾರ ಬೇಧಿಯನ್ನು ನಿಯಂತ್ರಿಸಲು ನ.15 ರಿಂದ ತೀವ್ರತರ ಅತಿಸಾರ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಂಡಿದ್ದು ಸಮುದಾಯ ಜಾಗೃತಿ ಮತ್ತು ಸೇವೆ ನೀಡಲಾಗುವುದು.

ಜಿಲ್ಲೆಯಾದ್ಯಂತ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಸಹಾಯಕರು ಮನೆ ಮನೆ ಸಮೀಕ್ಷೆ ನಡೆಸಿ 0 ಯಿಂದ 5 ವರ್ಷದೊಳಗಿನ ಮಕ್ಕಳಿರುವ ಮನೆಯನ್ನು ಗುರುತಿಸಿ, ಓಆರ್‌ಎಸ್ ಪ್ಯಾಕೆಟ್ ನೀಡುವರು. ಅತಿಸರ ಲಕ್ಷಣವುಳ್ಳ ಮಕ್ಕಳಿದ್ದಲ್ಲಿ ಓಆರ್‌ಎಸ್ ಜೊತೆ ಝಿಂಕ್ ಮಾತ್ರೆ ನೀಡುವರು. 14 ದಿನಗಳವರೆಗೆ ಮಾತ್ರೆ ತೆಗೆದುಕೊಳ್ಳಬೇಕು. ಜೊತೆಗೆ ಸ್ವಚ್ಚತೆ, ನೈರ್ಮಲ್ಯ ಕಾಪಾಡಿಕೊಳ್ಳಲು ತಿಳುವಳಿಕೆ ನೀಡಲಾಗುವುದು ಎಂದರು.

ಮಕ್ಕಳಲ್ಲಿ ಕಾಣುವ ಪಕ್ಕೆ ನೋವು–ಬಾಲ್ಯಾವಧಿ ನ್ಯೂಮೋನಿಯಾ ನಿರ್ವಹಣೆ ಕಾರ್ಯಕ್ರಮದಡಿ ಸಮುದಾಯಲ್ಲಿ ಅರಿವು ಮೂಡಿಸಲಾಗುವುದು. ಪಕ್ಕೆ ನೋವು, ಶ್ವಾಸಕೋಸದ ಸೋಂಕಿರುವ ಮಕ್ಕಳಿಗೆ ತಕ್ಷಣ ಚಿಕಿತ್ಸೆ ನೀಡಬೇಕು. ಹಾಗೂ ಎಲ್ಲಾ ಅರ್ಹ ಮಕ್ಕಳಿಗೆ 3 ಡೋಸ್ ಪಿಸಿವಿ ಲಸಿಕೆಯನ್ನು ತಪ್ಪದೆ ನೀಡಬೇಕು.

ರಾಜ್ಯವನ್ನು ಅಪೌಷ್ಟಿಕ ಮುಕ್ತ ರಾಜ್ಯವನ್ನಾಗಿಸಲು ರಕ್ತಹೀನತೆ ಮುಕ್ತ ಪೌಷ್ಟಿಕ ಕರ್ನಾಟಕ ಯೋಜನೆಯನ್ನು ಸಹ ಅನುಷ್ಠಾನಗೊಳಿಸಲಾಗುತ್ತಿದ್ದು, ಗರ್ಭಿಣಿಯರು, ಮಕ್ಕಳು, ಹದೆಹರೆಯದ ಹೆಣ್ಣು–ಗಂಡುಮಕ್ಕಳು, ಎಲ್ಲ ಮಹಿಳೆಯರು, ಪುರುಷರು ಮತ್ತು ಅಪೌಷ್ಟಿಕ ಮಕ್ಕಳು ಈ ಯೋಜನೆಯ ಫಲಾನುಭವಿಗಳಾಗಿದ್ದು , ಇವರಿಗೆ ರಕ್ತ ಪರೀಕ್ಷೆ ನಡೆಸಿ ಸೂಕ್ತ ಚಿಕಿತ್ಸೆ ನೀಡಲಾಗುವುದು ಎಂದರು.

ಇದೇ ವೇಳೆ ಸಿಡಿಪಿಓ ಚಂದ್ರಪ್ಪ ಓಆರ್‌ಎಸ್ ಪಾನಕ ತಯಾರಿಕೆ ವಿಧಾನವನ್ನು ತೋರಿಸಿಕೊಟ್ಟರು. ಕಾರ್ಯಕ್ರಮದಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಡಾ.ಚಂದ್ರಶೇಖರ್, ಆರೋಗ್ಯ ಶಿಕ್ಷಣಾಧಿಕಾರಿ ಅಕ್ತರ್, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಸಿಬ್ಬಂದಿಗಳು, ತಾಯಂದಿರು ಹಾಜರಿದ್ದರು.

ಸಂಪುಟ: 4 ಸಂಚಿಕೆ: 240 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089